ಸಂಪುಟ 01 । ಸಂಚಿಕೆ 194 ಶುಕ್ರವಾರ 18 ಸೆಪ್ಟೆಂಬರ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ
NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಅಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1)World Bamboo Day (ವಿಶ್ವ ಬಿದಿರು ದಿನ) ಬಿದಿರಿನ ಮಹತ್ವ, ಪರಿಸರ ಸಂರಕ್ಷಣೆ ಮತ್ತು ಸುಸ್ಥಿರ ಬಳಕೆಯ ಬಗ್ಗೆ ಜಾಗೃತಿ ಮೂಡಿಸುವ ದಿನ.

2) International Equal Pay Day (ಅಂತರರಾಷ್ಟ್ರೀಯ ಸಮಾನ ವೇತನ ದಿನ) ಸಮಾನ ಕೆಲಸಕ್ಕೆ ಸಮಾನ ವೇತನದ ಮಹತ್ವವನ್ನು ಒತ್ತಿಹೇಳುವ ದಿನ.

3) National Respect Day (ರಾಷ್ಟ್ರೀಯ ಗೌರವ ದಿನ) ಪರಸ್ಪರ ಗೌರವ, ಸೌಜನ್ಯ ಮತ್ತು ಉತ್ತಮ ಸಂಬಂಧಗಳ ಮಹತ್ವವನ್ನು ನೆನಪಿಸುವ ದಿನ.

4)World Cleanup Day 2026ರಲ್ಲಿ ಸೆಪ್ಟೆಂಬರ್ 18ರಂದು ಜಾಗತಿಕ ಸ್ವಚ್ಛತಾ ಅಭಿಯಾನದ ಅಂಗವಾಗಿ ಆಚರಣೆಗಳು ನಡೆಯುತ್ತವೆ.

ಸುಭಾಷಿತ

ನಡೆದಷ್ಟೂ ದಾರಿಯಿದೆ, ಪಡೆದಷ್ಟೂ ಭಾಗ್ಯವಿದೆ ಎಂಬುದೇ ಜಗತ್ತು ನಮಗೆ ಕೊಡುವ ಸಂದೇಶ.

ವಿ.ಕೃ. ಗೋಕಾಕ್

ಶ್ರೀನಿವಾಸ ಕ್ಯಾಂಪ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ರಾಷ್ಟ್ರ ನಾಯಕರ ಪೋಟೋ ಕೊಡುಗೆ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ತಾಲೂಕಿನ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಶ್ರೀನಿವಾಸ ಕ್ಯಾಂಪ್ ಶಾಲೆಗೆ 12 ಸಾವಿರ ರೂಪಾಯಿಗಳ ಮೌಲ್ಯದ ರಾಷ್ಟ್ರ ನಾಯಕರ ಫೋಟೋಗಳನ್ನು ಗೋಪಾಲ ಜಾಜಿ ಪರಿಸರ ಪ್ರೇಮಿಗಳು ಎಲೆಕೂಡ್ಲಿಗಿ ಮತ್ತು ರಾಜು ಪತ್ತಾರ್ ಶ್ರೀ ಕಾಳಿಕಾದೇವಿ ಜುವೇಲರ್ಸ ಸುಲ್ತಾನಪೂರ ಅಧ್ಯಕ್ಷರು ವನಸಿರಿ ಫೌಂಡೇಶನ್ ಮಸ್ಕಿ ಇವರು ಕೊಡುಗೆ ನೀಡಿದ್ದಾರೆ.



ಇವರಿಗೆ ಶಾಲೆಯ ಎಸ್.ಡಿ. ಎಮ್.ಸಿ ಅಧ್ಯಕ್ಷರಾದ ಹುಚ್ಚಾರೆಡ್ಡಿ ಬಾಗಲವಾಡ, ಉಪಾಧ್ಯಕ್ಷರಾದ ಅಯ್ಯಪ್ಪ ಕೂಡ್ಲೂರು, ಗ್ರಾಮದ ಗುರು ಹಿರಿಯರು ಹಾಗೂ ಶಾಲೆಯ ಪ್ರಭಾರಿ ಮುಖ್ಯ ಗುರುಗಳಾದ ದುರುಗಪ್ಪ ಗುಡದೂರು ಮತ್ತು ಶಿಕ್ಷಕರು ವಿದ್ಯಾರ್ಥಿಗಳು ಅಭಿನಂದನೆಗಳನ್ನು ತಿಳಿಸಿದ್ದಾರೆ.

ಸನ್ ರೈಸ್ ಕಾಲೇಜಿನಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ಧ್ವಜಾರೋಹಣ

ಸರ್ದಾರ್ ಪಟೇಲ್, ಅಂಬೇಡ್ಕರ್ ಕೊಡುಗೆ ಸದಾ ಸ್ಮರಣೀಯ – ಲಾಜರ್ ಸಿರಿಲ್

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕಲ್ಯಾಣ ಕರ್ನಾಟಕದ ಇತಿಹಾಸ, ಸ್ವಾತಂತ್ರ್ಯ ಹೋರಾಟ ಹಾಗೂ ಈ ಭಾಗದ ಜನರ ತ್ಯಾಗ, ಹೋರಾಟ ಮತ್ತು ಅಭಿವೃದ್ಧಿಯ ಪಯಣವನ್ನು ಸ್ಮರಿಸುವ ಉದ್ದೇಶದಿಂದ ಸನ್ ರೈಸ್ ಡಿ-ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜು, ಸಿಂಧನೂರು ವತಿಯಿಂದ ಕಲ್ಯಾಣ ಕರ್ನಾಟಕ ಉತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.



ಕಾರ್ಯಕ್ರಮದ ಅಂಗವಾಗಿ ಸಂಸ್ಥೆಯ ಗೌರವಾಧ್ಯಕ್ಷರಾದ ಶ್ರೀ ಖಾಜಾ ಮೋಹಿನುದ್ದೀನ್ ಅತ್ತಾರ್ ಅವರು ಕಲ್ಯಾಣ ಕರ್ನಾಟಕ ಉತ್ಸವದ ಧ್ವಜಾರೋಹಣ ನೆರವೇ-ರಿಸಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತ ಮಂಡಳಿ, ವಿವಿಧ ವಿಭಾಗಗಳ ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತ-ರಿದ್ದು, ಕಲ್ಯಾಣ ಕರ್ನಾಟಕದ ಏಕತೆ, ಅಭಿವೃದ್ಧಿ ಮತ್ತು ಪ್ರಗತಿಯ ಸಂಕಲ್ಪವನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಸನ್ ರೈಸ್ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು, ಕಲ್ಯಾಣ ಕರ್ನಾಟಕದ ಇತಿಹಾಸವನ್ನು ಪ್ರತಿಯೊಬ್ಬ ವಿದ್ಯಾರ್ಥಿಯೂ ತಿಳಿದುಕೊಳ್ಳಬೇಕು. ಈ ಭಾಗವು ಹಿಂದೆ ಹೈದ್ರಾಬಾದ್ ಕರ್ನಾಟಕ ಎಂದು ಕರೆಯಲ್ಪಡುತ್ತಿತ್ತು. ನಿಜಾಮರ ಆಳ್ವಿಕೆಯ ಸಂದರ್ಭದಲ್ಲಿ ಈ ಭಾಗದ ಜನರು ಹಲವು ರೀತಿಯ ಸಂಕಷ್ಟಗಳನ್ನು ಎದುರಿಸಿದ್ದರು. ಸ್ವಾತಂತ್ರ್ಯ ಬಂದ ನಂತರವೂ ಹೈದ್ರಾಬಾದ್ ಸಂಸ್ಥಾನ ಭಾರತದ ಒಕ್ಕೂಟಕ್ಕೆ ಸೇರ್ಪಡೆಯಾಗುವುದು ಒಂದು ಮಹತ್ವದ ಐತಿಹಾಸಿಕ ಘಟ್ಟವಾಗಿತ್ತು ಎಂದು ವಿವರಿಸಿದರು.

ಭಾರತದ ಏಕತೆ ಮತ್ತು ಅಖಂಡತೆಯನ್ನು ಕಾಪಾಡುವ ನಿಟ್ಟಿನಲ್ಲಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರು ವಹಿಸಿದ ಪಾತ್ರವನ್ನು ಸ್ಮರಿಸಿದ ಅವರು, ಹೈದ್ರಾಬಾದ್ ಸಂಸ್ಥಾನವನ್ನು ಭಾರತೀಯ ಒಕ್ಕೂಟದೊಂದಿಗೆ ವಿಲೀನಗೊಳಿಸುವ ಪ್ರಕ್ರಿಯೆಯಲ್ಲಿ ಸರ್ದಾರ್ ಪಟೇಲ್ ಅವರ ದೃಢ ನಿಲುವು ಮಹತ್ವದ್ದಾಗಿತ್ತು ಎಂದರು. ಇದೇ ಸಂದರ್ಭದಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಕೊಡುಗೆಯನ್ನು ಸ್ಮರಿಸಿದ ಅವರು, ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕು, ಸ್ವಾತಂತ್ರ್ಯ, ನ್ಯಾಯ ಮತ್ತು ಸಮಾನತೆಯ ತತ್ವಗಳನ್ನು ಸಂವಿಧಾನದ ಮೂಲಕ ನೀಡಿರುವುದು ಭಾರತೀಯ ಪ್ರಜಾಪ್ರಭುತ್ವದ ಮಹತ್ವದ ಸಾಧನೆಯಾಗಿದೆ ಎಂದು ಹೇಳಿದರು.



ಕಲ್ಯಾಣ ಕರ್ನಾಟಕದ ಇತಿಹಾಸವು ಕೇವಲ ಹಳೆಯ ಘಟನೆಗಳನ್ನು ನೆನಪಿಸಿಕೊಳ್ಳುವುದಕ್ಕೆ ಸೀಮಿತವಾಗಬಾರದು. ಈ ಭಾಗದ ಜನರ ಹೋರಾಟ, ತ್ಯಾಗ ಮತ್ತು ಆಶಯಗಳನ್ನು ಮುಂದಿನ ಪೀಳಿಗೆಗೆ ತಿಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಶಿಕ್ಷಣ, ಆರೋಗ್ಯ, ಉದ್ಯೋಗ, ಕೃಷಿ, ಕೈಗಾರಿಕೆ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ಕಲ್ಯಾಣ ಕರ್ನಾಟಕವು ಅಭಿವೃದ್ಧಿಯತ್ತ ಸಾಗಬೇಕು. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಸಮಾಜದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಬೇಕು ಎಂದು ಅವರು ಕರೆ ನೀಡಿದರು. ಕಲ್ಯಾಣ ಕರ್ನಾಟಕ ಉತ್ಸವವು ಕೇವಲ ಧ್ವಜಾರೋಹಣದ ಕಾರ್ಯಕ್ರಮವಲ್ಲ; ಇದು ನಮ್ಮ ಇತಿಹಾಸವನ್ನು ಸ್ಮರಿಸುವ, ಹೋರಾಟಗಾರರನ್ನು ಗೌರವಿಸುವ ಹಾಗೂ ಭವಿಷ್ಯದ ಅಭಿವೃದ್ಧಿಗೆ ಸಂಕಲ್ಪ ಮಾಡುವ ದಿನವಾಗಿದೆ. ಈ ಭಾಗದ ಯುವಜನರು ತಮ್ಮ ನೆಲದ ಇತಿಹಾಸವನ್ನು ಅರಿತುಕೊಂಡು, ಶಿಕ್ಷಣ ಹಾಗೂ ಕೌಶಲ್ಯದ ಮೂಲಕ ಉತ್ತಮ ಭವಿಷ್ಯ ನಿರ್ಮಿಸಿಕೊಳ್ಳಬೇಕು. ಸಮಾಜದಲ್ಲಿ ಸೌಹಾರ್ದತೆ, ಸಹೋದರತೆ ಮತ್ತು ರಾಷ್ಟ್ರೀಯ ಏಕತೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಶ್ರಮಿಸಬೇಕು ಎಂದು ಲಾಜರ್ ಸಿರಿಲ್ ಹೇಳಿದರು.

ಕಾರ್ಯಕ್ರಮವನ್ನು ಉಪನ್ಯಾಸಕರಾದ ವೀರೇಶ್ ಅವರು ಅಚ್ಚುಕಟ್ಟಾಗಿ ನಿರೂಪಿಸಿ, ಕಾರ್ಯಕ್ರಮದ ಸಂಪೂರ್ಣ ನಿರ್ವಹಣೆಯನ್ನು ಸಮರ್ಪಕವಾಗಿ ನೆರವೇರಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಇರ್ಷಾದ್ ಕೆ, ಫಾರ್ಮಸಿ ಕಾಲೇಜಿನ ಪ್ರಾಚಾರ್ಯರಾದ ವಾಸಿಂ ಹುಸೇನ್, ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್, ಪ್ಯಾರಾ ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಡಿ. ಚಕ್ರವರ್ತಿ ಸೇರಿದಂತೆ ಉಪನ್ಯಾಸಕರಾದ ರಾಜೇಶ್, ಅಶು ಪಾಷಾ, ಸಂತೋಷಿ, ಸುಧಾ, ವೀರೇಶ್, ಶೋಭಾ, ದಿಲೀಪ್, ಹರ್ಷಿತಾ, ಸಾಗರ್, ಚೈತ್ರ, ಸನಾ, ಸುರೇಶ್ ಯಾದವ್ ಹಾಗೂ ವಿವಿಧ ವಿಭಾಗಗಳ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದ ಮೂಲಕ ಕಲ್ಯಾಣ ಕರ್ನಾಟಕದ ಐತಿಹಾಸಿಕ ಹಿನ್ನೆಲೆ, ಸ್ವಾತಂತ್ರ್ಯ ಹೋರಾಟದ ಮಹತ್ವ, ಸಾಮಾಜಿಕ ನ್ಯಾಯ ಹಾಗೂ ಈ ಭಾಗದ ಸರ್ವಾಂಗೀಣ ಅಭಿವೃದ್ಧಿಯ ಅಗತ್ಯತೆಯ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಾಯಿತು. ಕಲ್ಯಾಣ ಕರ್ನಾಟಕದ ಇತಿಹಾಸ ನಮ್ಮ ಹೆಮ್ಮೆ, ಅದರ ಅಭಿವೃದ್ಧಿ ನಮ್ಮೆಲ್ಲರ ಜವಾಬ್ದಾರಿ. ಶಿಕ್ಷಣ, ಏಕತೆ ಮತ್ತು ಅಭಿವೃದ್ಧಿಯ ಮೂಲಕ ಕಲ್ಯಾಣ ಕರ್ನಾಟಕವನ್ನು ಮತ್ತಷ್ಟು ಪ್ರಗತಿಯತ್ತ ಕೊಂಡೊಯ್ಯುವ ಸಂಕಲ್ಪದೊಂದಿಗೆ ಉತ್ಸವವನ್ನು ಆಚರಿಸಲಾಯಿತು. ಕಲ್ಯಾಣ ಕರ್ನಾಟಕದ ಹೆಮ್ಮೆ ನಮ್ಮೆಲ್ಲರ ಹೆಮ್ಮೆ! ಕಲ್ಯಾಣ ಕರ್ನಾಟಕ ಉತ್ಸವದ ಹಾರ್ದಿಕ ಶುಭಾಶಯಗಳು.







ಸಾಮಾಜಿಕ ಸಾಮರಸ್ಯಕ್ಕೆ ಪಂಚ ಪರಿವರ್ತನೆ ಅಗತ್ಯ ಆರ್. ಕೊಟ್ರಪ್ಪ

❑ ನೈಜ್ಯ ದೆಸೆ ನ್ಯೂಸ್

ಕುಷ್ಟಗಿ: ಗಣೇಶ ಚತುರ್ಥಿ ಅಂಗವಾಗಿ ರಾಷ್ಟ್ರೋತ್ಥಾನ ಪರಿಷತ್ ಬೆಂಗಳೂರು, ರಾಷ್ಟ್ರೋತ್ಥಾನ ಬಳಗ ಕುಷ್ಟಗಿ ತಾಲೂಕು ಹಾಗೂ ಹಿಂದೂ ಮಹಾಮಂಡಳಿ ವತಿಯಿಂದ ನಗರದ ಮಾತೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ರಾಷ್ಟ್ರೋತ್ಥಾನ ಪರಿಷತ್ತಿನ ವಿಭಾಗ ಸಂಚಾಲಕ ಆರ್. ಕೊಟ್ರಪ್ಪ ಅವರು 'ಪಂಚ ಪರಿವರ್ತನೆ' ವಿಷಯದ ಕು-ರಿತು ಬೌದ್ಧಿಕ ನಡೆಸಿದರು. ಸಮಾಜದಲ್ಲಿ ಜಾತಿಯ ಹೆಸರಿನಲ್ಲಿ ಉಂಟಾಗುವ ಭೇದಭಾವ ಮತ್ತು ಕಲಹಗಳನ್ನು ದೂರ ಮಾಡಿ ಸಾಮಾಜಿಕ ಸಾಮರಸ್ಯ





ಬೆಳೆಸಬೇಕಿದೆ. ಎಲ್ಲರಿಗೂ ಒಂದೇ ಭೂಮಿ, ಒಂದೇ ಜಲ ಎಂಬ ಭಾವನೆಯೊಂದಿಗೆ ಮಾನವಕುಲ ಒಂದೇ ಎಂಬ ಅರಿವು ಮೂಡಬೇಕು. ಮನೆಯಲ್ಲಿ ತಮ್ಮ ತಮ್ಮ ಧಾರ್ಮಿಕ ಆಚರಣೆಗಳನ್ನು ಪಾಲಿಸಬಹುದು; ಆದರೆ ಸಾರ್ವಜನಿಕವಾಗಿ ಎಲ್ಲರೂ ಒಂದೇ ಮಾನವಕುಲದ ಸದಸ್ಯರು ಎಂಬ ಭಾವನೆಯಿಂದ ಬದುಕಬೇಕು ಎಂದರು.

ಮಕ್ಕಳು ಶಿಕ್ಷಣದಲ್ಲಿ ಉತ್ತಮ ಅಂಕ ಗಳಿಸುವುದರ ಜೊತೆಗೆ ಸಂಸ್ಕಾರ, ಶಿಸ್ತು ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಳ್ಳುವಂತೆ ಪೋಷಕರು ಮಾರ್ಗದರ್ಶನ ನೀಡಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಸಂಘದ ತಾಲೂಕು ಸಂಚಾಲಕ ಬಸನಗೌಡ ಪಾಟೀಲ, ರಾಷ್ಟ್ರೋತ್ಥಾನ ಬಳಗದ ಸಂಚಾಲಕಿ ಶಿಲ್ಪಾ ಪಾಟೀಲ, ಕೊಪ್ಪಳ ಜಿಲ್ಲಾ ಸಂಯೋಜಕ ಶಶಿಧರ ದೇಶಪಾಂಡೆ, ಅರುಣ್ ಕರ್ಮಕರ್, ಪರಶುರಾಮ್, ವಿಷ್ಣು ರಜಪೂತ್ ಸೇರಿದಂತೆ ನಗರದ ಮಾತೆಯರು ಉಪಸ್ಥಿತರಿದ್ದರು.

ಜನತಾ ಕಾಲೋನಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ಜನತಾ ಕಾಲೋನಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಸಂಭ್ರಮದಿಂದ ಆಚ-ರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಎಸ್‌ಡಿಎಂಸಿ ಅಧ್ಯಕ್ಷರಾದ ಖುರ್ಷಿದ್ ಪಟೇಲ್ ಹಾಗೂ ಶಾಲೆಯ ಮುಖ್ಯಶಿಕ್ಷಕಿ ಉಲ್ಪತುನಿಸಾ ಬೇಗಂ ಅವರು ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಎಸ್‌ಡಿಎಂಸಿ ಅಧ್ಯಕ್ಷ ಖುರ್ಷಿದ್ ಪಟೇಲ್, ಹೈದರಾಬಾದ್



ಕರ್ನಾಟಕ ವಿಮೋಚನೆಗಾಗಿ ಹೋರಾಡಿದ ಹೋರಾಟಗಾರರನ್ನು ಪ್ರತಿಯೊಬ್ಬರೂ ಸ್ಮ-ರಿಸಬೇಕು. ಅವರ ತ್ಯಾಗ ಮತ್ತು ಹೋರಾಟದ ಫಲವಾಗಿ ಈ ಭಾಗಕ್ಕೆ ವಿಮೋಚನೆ ದೊರೆತಿದ್ದು, ಅವರ ಕೊಡುಗೆಯನ್ನು ಮುಂದಿನ ಪೀಳಿಗೆಗೆ ತಿಳಿಸಬೇಕು ಎಂದು ಹೇಳಿದರು.

ಮುಖ್ಯಶಿಕ್ಷಕಿ ಉಲ್ಪತುನಿಸಾ ಬೇಗಂ ಅವರು ಕಾರ್ಯಕ್ರಮಕ್ಕೆ ಆಗಮಿಸಿದ ಎಲ್ಲರನ್ನು ಸ್ವಾಗತಿಸಿ, ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಸಹ ಶಿಕ್ಷಕಿ ಸುನಿತಾ, ಅತಿಥಿ ಶಿಕ್ಷಕ ಸೋಮಣ್ಣ ನಾಯಕ್, ಎಸ್‌ಡಿಎಂಸಿ ಸದಸ್ಯರಾದ ಶಿವಪ್ಪ ಅಂಜಾಳ್, ಮಹಮ್ಮದ್ ಇದ್ರಿಸ್, ಹುಸೇನಪ್ಪ ತವಗ, ಮಹಿನೋದ್ದೀನ್, ಸರ್ನೋಬಾತ್ ಸೇ-ರಿದಂತೆ ಅಡುಗೆ ಸಿಬ್ಬಂದಿ ಮಲ್ಲಮ್ಮ, ಎಲ್ಲಮ್ಮ ಅಂಜಾಳ್ ಹಾಗೂ ಶಾಲಾ ಮಕ್ಕಳು ಭಾಗವಹಿಸಿದ್ದರು.

ಕಲ್ಯಾಣ ಕರ್ನಾಟಕದ ಸಮಗ್ರ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸೋಣ:ಬಸನಗೌಡ ಬಾದರ್ಲಿ

❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸಿಂಧನೂರು ತಾಲೂಕು ಆಡಳಿತ ವತಿಯಿಂದ ನಗರದ ಟೌನ್ ಹಾಲ್‌ನಲ್ಲಿ ಆಯೋಜಿಸಲಾಗಿದ್ದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹೈದ್ರಾಬಾದ್ ಕರ್ನಾಟಕದ ಐತಿಹಾಸಿಕ ಹೋರಾಟ, ತ್ಯಾಗ, ಸಂಸ್ಕೃತಿ ಹಾಗೂ ಈ ಭಾಗದ ಜನರ ಆಶೋತ್ತರಗಳನ್ನು ಸ್ಮರಿಸಿದರು. ಹೈದ್ರಾಬಾದ್ ಕರ್ನಾಟಕ ಎಂದು ಕರೆಯಲ್ಪಡುತ್ತಿದ್ದ ಇಂದಿನ ಕಲ್ಯಾಣ ಕರ್ನಾಟಕ ಪ್ರದೇಶವು ತನ್ನದೇ ಆದ ವಿಶಿಷ್ಟ ಇತಿಹಾಸವನ್ನು ಹೊಂದಿದೆ. ನಿಜಾಮರ ಆಡಳಿತದಿಂದಾಗಿ ದೀರ್ಘಕಾಲ ಹಿಂದುಳಿದಿದ್ದ ಈ ಭಾಗವನ್ನು ಪ್ರಜಾಪ್ರಭುತ್ವದ ಮುಖ್ಯವಾಹಿನಿಗೆ ತರಲು ನಡೆದ ಹೋರಾಟದಲ್ಲಿ ಅನೇಕ ಮಹನೀಯರು ಹಾಗೂ ಹೋರಾಟಗಾರರು ತ್ಯಾಗ, ಬಲಿದಾನ ಮಾಡಿದ್ದಾರೆ. ಅವರ ಹೋರಾಟದ ಫಲವಾಗಿ ಈ ಭಾಗವು ಕರ್ನಾಟಕದೊಂದಿಗೆ ಏಕೀಕರಣಗೊಂಡು, ಪ್ರಜಾಪ್ರಭುತ್ವದ ಆಡಳಿತ ವ್ಯವಸ್ಥೆಯ ಭಾಗವಾಯಿತು ಎಂದು ಹೇಳಿದರು.



ಹೈದ್ರಾಬಾದ್ ಕರ್ನಾಟಕ ಭಾಗವು ಶಿಕ್ಷಣ, ಆರೋಗ್ಯ, ಉದ್ಯೋಗ, ಕೃಷಿ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಹಲವು ವರ್ಷಗಳ ಹಿಂದುಳಿತನವನ್ನು ಎದು-ರಿಸಿದೆ. ಈ ಭಾಗದ ಜನರ ನಿರಂತರ ಹೋರಾಟ ಹಾಗೂ ಅಭಿವೃದ್ಧಿಯ ಅಗತ್ಯವನ್ನು ಪರಿಗಣಿಸಿ ಸಂವಿಧಾನದ 371(ಜೆ) ವಿಶೇಷ ಸ್ಥಾನಮಾನ ದೊರೆತಿರುವುದು ಮಹತ್ವದ ಮೈಲಿಗಲ್ಲಾಗಿದೆ. ಇದರ ಮೂಲಕ ಶಿಕ್ಷಣ ಮತ್ತು ಉದ್ಯೋಗ ಕ್ಷೇತ್ರಗಳಲ್ಲಿ ಈ ಭಾಗದ ಯುವಜನರಿಗೆ ಹೆಚ್ಚಿನ ಅವಕಾಶಗಳು ಲಭಿಸುವಂತಾಗಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕವು ಕೇವಲ ಭೌಗೋಳಿಕ ಪ್ರದೇಶವಲ್ಲ. ಇದು ಹೋರಾಟಗಾರರ ತ್ಯಾಗ, ಜನರ ಪರಿಶ್ರಮ, ವೈವಿಧ್ಯಮಯ ಸಂಸ್ಕೃತಿ ಹಾಗೂ ಅಭಿವೃದ್ಧಿಯ ಕನಸುಗಳನ್ನು ಒಳಗೊಂಡಿರುವ ನಾಡಾಗಿದೆ. ಹೈದ್ರಾಬಾದ್ ಕರ್ನಾಟಕದ ಹೋರಾಟದ ಇತಿಹಾಸವನ್ನು ಇಂದಿನ ಯುವ ಪೀಳಿಗೆ ತಿಳಿದುಕೊಳ್ಳಬೇಕು. ಈ ಭಾಗದ ಅಭಿವೃದ್ಧಿಗಾಗಿ ಸರ್ಕಾರದ ಯೋಜನೆಗಳನ್ನು ಸಮರ್ಪಕವಾಗಿ ಬಳಸಿಕೊಂಡು ಶಿಕ್ಷಣ, ಉದ್ಯೋಗ, ಕೃಷಿ, ಕೈಗಾರಿಕೆ, ಆರೋಗ್ಯ ಮತ್ತು ಮೂಲಭೂತ ಸೌಕರ್ಯಗಳ ಕ್ಷೇತ್ರದಲ್ಲಿ ಮತ್ತಷ್ಟು ಪ್ರಗತಿ ಸಾಧಿಸಬೇಕಾಗಿದೆ ಎಂದರು.

ಕಲ್ಯಾಣ ಕರ್ನಾಟಕದ ಜನರ ಆಶೋತ್ತರಗಳಿಗೆ ಸ್ಪಂದಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ವಿಶೇಷವಾಗಿ ಯುವಜನರಿಗೆ ಗುಣಮಟ್ಟದ ಶಿಕ್ಷಣ ಹಾಗೂ ಉದ್ಯೋಗಾವಕಾಶಗಳನ್ನು ಕಲ್ಪಿಸುವುದು, ರೈತರ ಕೃಷಿಗೆ ಅಗತ್ಯವಾದ ನೀರು ಮತ್ತು ಮೂಲಸೌಕರ್ಯ ಒದಗಿಸುವುದು, ಗ್ರಾಮೀಣ ಪ್ರದೇಶಗಳ ರಸ್ತೆ, ಕುಡಿಯುವ ನೀರು, ಆರೋಗ್ಯ ಹಾಗೂ ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸುವ ಮೂಲಕ ಈ ಭಾಗವನ್ನು ಅಭಿವೃದ್ಧಿಯ ಪಥ-'ದಲ್ಲಿ ಮುನ್ನಡೆಸಬೇಕಾಗಿದೆ ಎಂದು ಹೇಳಿದರು.

ಹೈದ್ರಾಬಾದ್ ಕರ್ನಾಟಕದಿಂದ ಕಲ್ಯಾಣ ಕರ್ನಾಟಕದವರೆಗೆ ನಡೆದಿರುವ ಪರಿವರ್ತನೆ



ನಮ್ಮೆಲ್ಲರ ಹೆಮ್ಮೆಯ ವಿಚಾರ. ಆದರೆ ಇತಿಹಾಸವನ್ನು ಸ್ಮರಿಸುವುದರ ಜೊತೆಗೆ ಮುಂದಿನ ಪೀಳಿಗೆಗೆ ಉತ್ತಮ ಭವಿಷ್ಯ ನಿರ್ಮಿಸುವ ಸಂಕಲ್ಪವೂ ಅಗತ್ಯ. ಕಲ್ಯಾಣ ಕರ್ನಾಟಕವನ್ನು ರಾಜ್ಯದ ಅಭಿವೃದ್ಧಿಯಲ್ಲಿ ಮುಂಚೂಣಿಯ ಪ್ರದೇಶವನ್ನಾಗಿ ರೂಪಿಸಲು ಎಲ್ಲರೂ ಪಕ್ಷಾತೀತವಾಗಿ, ಜಾತಿ-ಧರ್ಮ ಭೇದವಿಲ್ಲದೆ ಒಗ್ಗಟ್ಟಿನಿಂದ ಶ್ರಮಿಸೋಣ ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ತಾಲೂಕು ಆಡಳಿತದ ಅಧಿಕಾರಿಗಳು, ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ಗಣ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಸಾಹಿತ್ಯ ಸಿಂಚನ

ನಕ್ಷತ್ರವಾಗುವ ಆಸೆ

ಆಕಾಶದ ನೀಲಿಯಲ್ಲಿ ಮಿನುಗುವ ನಕ್ಷತ್ರವಾಗಿ,
ಕನಸುಗಳ ದಾರಿಯಲ್ಲಿ ಸಾಗುವ ಆಸೆಯಾಗಿ.
ಕತ್ತಲೆಯ ನಡುವೆ ಬೆಳಕಾಗಿ ಹೊಳೆಯಬೇಕು,
ನನ್ನದೇ ಗುರುತನ್ನು ಜಗದಲಿ ಮೂಡಿಸಬೇಕು.

ಸಣ್ಣ ಕನಸೊಂದು ಹೃದಯದಲ್ಲಿ ಹುಟ್ಟಿ,
ದೊಡ್ಡ ಗುರಿಯೊಂದು ಕಣ್ಣಲ್ಲಿ ಬೆಳೆದು,
ಬಿದ್ದರೂ ಮತ್ತೆ ಎದ್ದು ನಿಲ್ಲಬೇಕು,
ಸೋಲಿನ ನೆರಳನ್ನೂ ಗೆದ್ದು ನಡೆಯಬೇಕು.

ಮೋಡಗಳು ಬಂದರೂ ಬೆಳಕು ನಿಲ್ಲದು,
ಗಾಳಿ ಬೀಸಿದರೂ ದೀಪವು ಆರದು.
ನನ್ನೊಳಗಿನ ಭರವಸೆಯ ಕಿರಣದಿಂದ,
ಹೊಸ ದಾರಿಯೊಂದನ್ನು ಹುಡುಕಬೇಕು.


ಯಾರಿಗೂ ಕಾಣದ ಕತ್ತಲೆಯಲ್ಲೂ,
ನನ್ನ ಕನಸು ಮಿನುಗುತ್ತಿರಬೇಕು.
ದೂರದ ಆಕಾಶದ ನಕ್ಷತ್ರದಂತೆ,
ನನ್ನ ಬದುಕು ಅರ್ಥಪೂರ್ಣವಾಗಬೇಕು.

ಹೆಸರಿಗಾಗಿ ಅಲ್ಲ, ಬೆಳಕಿಗಾಗಿ,
ಜಗತ್ತಿಗೆ ಒಳ್ಳೆಯದಾಗುವ ಹಂಬಲಕ್ಕಾಗಿ,
ಒಂದು ದಿನ ಆಕಾಶದತ್ತ ನೋಡಿ,
“ನಾನೂ ನಕ್ಷತ್ರವಾದೆ” ಎಂದು ನಗಬೇಕು

ಜಾಲಹಳ್ಳಿಯಲ್ಲಿ ಅದ್ದೂರಿಯಾಗಿ ವಿಶ್ವಕರ್ಮ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ, ಸೆ.17: ರಾಯಚೂರು ಜಿಲ್ಲೆ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದಲ್ಲಿ ವಿಶ್ವಕರ್ಮ ಜಯಂತಿಯನ್ನು ಸಮಾಜ ಬಾಂಧವರ ಸಮ್ಮುಖದಲ್ಲಿ ಅದ್ದೂರಿಯಾಗಿ ಆಚರಿಸಲಾಯಿತು.



ಕಾರ್ಯಕ್ರಮದಲ್ಲಿ ಜಾಲಹಳ್ಳಿ ಹೋಬಳಿಯ ವಿವಿಧ ಗ್ರಾಮಗಳ ವಿಶ್ವಕರ್ಮ ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ವಿಶ್ವಕರ್ಮ ದೇವರ ಜಯಂತಿಯನ್ನು ಭಕ್ತಿಭಾವದಿಂದ ಆಚರಿಸಿದರು. ಈ ಸಂದರ್ಭದಲ್ಲಿ ಹನುಮಂತರಾಯ ಗಾಣದಾಳ, ಮೌನೇಶ್ ಸೋಮನಮರಡಿ, ವೆಂಕೋಬ ನಿಂಗದಳ್ಳಿ, ಸೂಗಪ್ಪ ನಿಂಗದಳ್ಳಿ, ಸೋಮು ಸುರೇಶ್ ಯೆರಂಡಿ, ಸಂಗಮೇಶ್ ಪತ್ತಾರ್, ಕಾಶಿಪತಿ ಬಾಗೂರು, ಮೌನೇಶ್ ಅಮರಾಪುರ, ಮೌನೇಶ್ ಸೂಗೂರು, ಚನ್ನಬಸವ ಗಾಣದಾಳ, ಮೌನೇಶ್ ತಾಳಿಕೋಟಿ, ಜಗ್ಗು ಸೂಗೂರು, ನವೀನ್ ಸಂಗಾಪುರ, ವೀರೇಶ್ ಮೇದನಾಪುರ ಸೇರಿದಂತೆ ವಿಶ್ವಕರ್ಮ ಸಮಾಜದ ಮುಖಂಡರು ಹಾಗೂ ಸಮಾಜ ಬಾಂಧವರು ಉಪಸ್ಥಿತರಿದ್ದರು. ವಿಶ್ವಕರ್ಮ ಸಮಾಜದ ಪರಂಪರೆ, ಕಲೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಕುರಿತು ಈ ಸಂದರ್ಭದಲ್ಲಿ ಮುಖಂಡರು ಮಾತನಾಡಿದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢಶಾಲೆಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನ ಹಾಗೂ ವಿಶ್ವಕರ್ಮ ಜಯಂತಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್

ಬಳಗಾನೂರು: ಪಟ್ಟಣದ ಶ್ರೀ ಬಸವೇಶ್ವರ ಸಂಯುಕ್ತ ಪ್ರೌಢಶಾಲೆಯಲ್ಲಿ 'ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ' ಹಾಗೂ 'ಶ್ರೀ ವಿಶ್ವಕರ್ಮ ದಿನಾಚರಣೆ'ಯನ್ನು ಅತ್ಯಂತ ವಿಜೃಂಭಣೆ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕನ್ನಡ ವಿಷಯ ಶಿಕ್ಷಕರಾದ ಶ್ರೀಮತಿ ಬೋರಮ್ಮ ಅವರ ನಿರೂಪಣೆಯೊಂದಿಗೆ ಕಾರ್ಯಕ್ರಮವು ಶುಭಾರಂಭಗೊಂಡಿತು. ಕಾರ್ಯಕ್ರಮದ ಆರಂಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್, ಮಹಾತ್ಮ ಗಾಂಧೀಜಿ ಹಾಗೂ



ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಲಾಯಿತು.ಸಮಾಜ ವಿಜ್ಞಾನ ಶಿಕ್ಷಕರಾದ ಶ್ರೀ ವೆಂಕಟೇಶ ಸರ್ ಅವರು ಕಲ್ಯಾಣ ಕರ್ನಾಟಕ ಭಾಗವು ನಿಜಾಮರ ಆಡಳಿತದ ಕಪಿಮುಷ್ಟಿಯಿಂದ ಸ್ವತಂತ್ರಗೊಂಡ ಐತಿಹಾಸಿಕ ಹೋರಾಟ ಮತ್ತು ಮಹಾನಾಯಕರ ತ್ಯಾಗದ ಕುರಿತು ವಿದ್ಯಾರ್ಥಿಗಳಿಗೆ ಸವಿಸ್ತಾರವಾಗಿ ತಿಳಿಸಿಕೊಟ್ಟರು. ಶ್ರೀ ವಿಶ್ವಕರ್ಮ ಮಹರ್ಷಿಗಳ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಲಾಯಿತು.

ಶಾಲೆಯ ಮುಖ್ಯಗುರುಗಳಾದ ಶ್ರೀ ಅಮರನಾಥ್ ಹಳ್ಳೂರ್ ಅವರು ಅಧ್ಯಕ್ಷೀಯ ಭಾಷಣ ಮಾಡಿ, ಕಲ್ಯಾಣ ಕರ್ನಾಟಕ ವಿಮೋಚನೆಯ ಇತಿಹಾಸ ಹಾಗೂ ವಿಶ್ವಕರ್ಮ ಮಹರ್ಷಿಗಳ ಕೊಡುಗೆಯ ಕು-ರಿತು ವಿದ್ಯಾರ್ಥಿಗಳಿಗೆ ಸಂದೇಶ ನೀಡಿದರು. ದೈಹಿಕ ಶಿಕ್ಷಣ ಶಿಕ್ಷಕರಾದ ಶ್ರೀ ಬಸವರಾಜ್ ಯಾದಗಿರಿ ಅವರು ಕಾರ್ಯಕ್ರಮದ ಕೊನೆಯಲ್ಲಿ ಎಲ್ಲರಿಗೂ ವಂದನಾರ್ಪಣೆ ಸಲ್ಲಿಸಿದರು. ಸದರಿ ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲಾ ನೌಕರವರ್ಗ ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಸಕ್ರಿಯವಾಗಿ ಪಾಲ್ಗೊಂಡಿದ್ದರು. ಕಾರ್ಯಕ್ರಮದ ಮುಕ್ತಾಯದ ನಂತರ ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಲಾಯಿತು.

ಸಹನಾ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಕಲ್ಯಾಣ ಕರ್ನಾಟಕ ದಿನಾಚರಣೆ ಸಂಭ್ರಮ

❑ ನೈಜ್ಯ ದೆಸೆ ನ್ಯೂಸ್

ಮುದುಗಲ್: ಸ್ಥಳೀಯ ಸಹನಾ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯನ್ನು ಅತ್ಯಂತ ವಿಜೃಂಭಣೆಯಿಂದ ಹಾಗೂ ದೇಶಭಕ್ತಿ ಭಾವನೆಯೊಂದಿಗೆ ಆಚರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಶಾಲೆಯ ಶಿಕ್ಷಕ ವೃಂದದವರು ಕಲ್ಯಾಣ ಕರ್ನಾಟಕ ವಿಮೋಚನಾ ಹೋರಾಟದ ಪ್ರಮುಖ ನಾಯಕರಾದ ಸರ್ದಾರ್ ವಲ್ಲಭಭಾಯಿ ಪಟೇಲ್, ಮಹಾತ್ಮ ಗಾಂಧೀಜಿ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು. ನಂತರ ಶಾಲಾ ಪ್ರಾಂಗಣದಲ್ಲಿ ಶಾಲೆಯ ಮುಖ್ಯಗುರುಗಳಾದ ಆದಿತ್ಯ ಅವರು ರಾಷ್ಟ್ರಧ್ವಜಾರೋಹಣ ನೆರವೇರಿಸಿದರು. ಬಳಿಕ ವಿದ್ಯಾರ್ಥಿಗಳು ರಾಷ್ಟ್ರಗೀತೆ ಹಾಗೂ ದೇಶಭಕ್ತಿ ಗೀತೆಗಳನ್ನು ಗಾಯನ ಮಾಡಿದರು.



ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಗುರು ಆದಿತ್ಯ ಅವರು, ಕಲ್ಯಾಣ ಕರ್ನಾಟಕ ಭಾಗವು ಶಿಕ್ಷಣ, ಆರೋಗ್ಯ, ಉದ್ಯೋಗ ಹಾಗೂ ಮೂಲಸೌಕರ್ಯ ಸೇ-ರಿದಂತೆ ವಿವಿಧ ಕ್ಷೇತ್ರಗಳಲ್ಲಿ ಇನ್ನಷ್ಟು ಅಭಿವೃದ್ಧಿ ಹೊಂದಬೇಕಾಗಿದೆ. ಈ ಭಾಗದ ಇತಿಹಾಸ ಮತ್ತು ಹೋರಾಟದ ಪರಂಪರೆಯನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದು ಹೇಳಿದರು. ಶಾಲೆಯ ವಿದ್ಯಾರ್ಥಿಗಳಾದ ಉಮೇರ, ಅಫ್ಷೀನ್, ವೈಷ್ಣವಿ ಹಾಗೂ ಸನಾ ಅವರು ಹೈದರಾಬಾದ್-ಕರ್ನಾಟಕ ವಿಮೋಚನಾ ದಿನಾಚರಣೆಯ ಐತಿಹಾಸಿಕ ಮಹತ್ವ ಕುರಿತು ಭಾಷಣ ಮಾಡಿದರು.

ಭಾರತವು 1947ರ ಆಗಸ್ಟ್ 15ರಂದು ಸ್ವಾತಂತ್ರ್ಯ ಪಡೆದರೂ, ಹೈದರಾಬಾದ್ ಸಂಸ್ಥಾನವು ನಿಜಾಮನ ಆಡಳಿತದಲ್ಲೇ ಮುಂದುವರಿದಿತ್ತು. 1948ರ ಸೆಪ್ಟೆಂಬರ್ 17ರಂದು ನಡೆದ ಸೇನಾ ಕಾರ್ಯಾಚರಣೆಯ ಬಳಿಕ ಹೈದರಾಬಾದ್ ಸಂಸ್ಥಾನವು ಭಾರತ ಒಕ್ಕೂಟಕ್ಕೆ ಸೇರ್ಪಡೆಯಾದ ಐತಿಹಾಸಿಕ ಹಿನ್ನೆಲೆಯನ್ನು ಶಾಲೆಯ ಶಿಕ್ಷಕಿಯರಾದ ಕವಿತಾ ಹಾಗೂ ರಶ್ಮಿ ಅವರು ವಿದ್ಯಾರ್ಥಿಗಳಿಗೆ ವಿವರಿಸಿದರು. ಶಾಲೆಯ ಮುದ್ದು ಮಕ್ಕಳು ಕಲ್ಯಾಣ ಕರ್ನಾಟಕದ ಹಿರಿಮೆ-ಗರಿಮೆಯನ್ನು ಬಿಂಬಿಸುವ ದೇಶಭಕ್ತಿ ಗೀತೆಗಳಿಗೆ ಮನಮೋಹಕ ನೃತ್ಯ ಪ್ರದರ್ಶಿಸಿದರು. ಅಲ್ಲದೆ, ವಿಮೋಚನಾ ಹೋರಾಟಗಾರರ ವೇಷಭೂಷಣ ಧರಿಸಿ ಕಾರ್ಯಕ್ರಮಕ್ಕೆ ಮತ್ತಷ್ಟು ಮೆರುಗು ತಂದರು. ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕಿಂ-ಯರಾದ ಪ್ರಿಯಾಂಕ, ಸುಮಯ್ಯ, ಕವಿತಾ, ರಶ್ಮಿ ಹಾಗೂ ಹೀನ ಬೇಗಂ ಸೇರಿದಂತೆ ಶಿಕ್ಷಕ ವೃಂದ ಮತ್ತು ವಿದ್ಯಾರ್ಥಿಗಳು ಉಪಸ್ಥಿತ-ರಿದ್ದು, ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಕಲಬುರಗಿ ಕಲ್ಯಾಣ ಕರ್ನಾಟಕ ಉತ್ಸವದಲ್ಲಿ ಶಾಸಕ ಹಂಪನಗೌಡ ಬಾದರ್ಲಿ ಭಾಗಿ

❑ ನೈಜ್ಯ ದೆಸೆ ನ್ಯೂಸ್

ಕಲಬುರಗಿ/ಸಿಂಧನೂರು: ನಗರದ ಐತಿಹಾಸಿಕ ಪೊಲೀಸ್ ಪರೇಡ್ ಮೈದಾನದಲ್ಲಿ ವಿಜೃಂಭಣೆಯಿಂದ ಜರುಗಿದ "ಕಲ್ಯಾಣ ಕರ್ನಾಟಕ ಉತ್ಸವ" (ವಿಮೋಚನಾ ದಿನಾಚರಣೆ) ಸಮಾರಂಭದಲ್ಲಿ ಸಿಂಧನೂರು ಕ್ಷೇತ್ರದ ಶಾಸಕರಾದ ಶ್ರೀ ಹಂಪನಗೌಡ ಬಾದರ್ಲಿ ಅವರು ಭಾಗವಹಿಸಿ, ರಾಷ್ಟ್ರಧ್ವಜಾರೋಹಣ ನೆರವೇರಿಸಿ ಗೌರವ ಸಲ್ಲಿಸಿದರು.

ಉಪ ಮುಖ್ಯಮಂತ್ರಿ ಶ್ರೀ ಡಿ.ಕೆ. ಶಿವಕುಮಾರ್ ಹಾಗೂ ಸಚಿವರಾದ ಶ್ರೀ ಪ್ರಿಯಾಂಕ್ ಖರ್ಗೆ ಸೇರಿದಂತೆ ಹಲವು ಗಣ್ಯರೊಂದಿಗೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಶಾಸಕರು, ಕಲ್ಯಾಣ ಕರ್ನಾಟಕದ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಮತ್ತು ಬಲಿದಾನಗಳನ್ನು ಸ್ಮರಿಸಿದರು. 1948ರ ಸೆಪ್ಟೆಂಬರ್ 17ರಂದು ನಿಜಾಮನ ಆಡಳಿತದಿಂದ ಮುಕ್ತಿ ಪಡೆದು ಭಾರತ ಒಕ್ಕೂಟಕ್ಕೆ ಸೇರಿದ ಈ ಭಾಗದ ಸ್ವಾಭಿಮಾನಿ ಹೋರಾಟಗಾರರ ತ್ಯಾಗವನ್ನು ಸದಾ ಸ್ಮರಣೀಯವಾಗಿಡುವ ಬಗ್ಗೆ ಪ್ರಸ್ತಾಪಿಸಲಾಯಿತು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ (KKRDB) ಮೂಲಕ ಭಾಗದ ಶಿಕ್ಷಣ, ಆರೋಗ್ಯ, ರಸ್ತೆ ಮತ್ತು ಮೂಲಸೌಕರ್ಯಗಳ ವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡುತ್ತಿರುವುದನ್ನು ಪುನರುಚ್ಚರಿಸಲಾಯಿತು.

ಸಂವಿಧಾನದ ವಿಧಿ 371(ಜೆ) ಅಡಿಯಲ್ಲಿ ಈ ಭಾಗದ ಯುವಜನತೆಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಸಿಗಬೇಕಾದ ಪ್ರಾತಿನಿಧ್ಯವನ್ನು ಇನ್ನಷ್ಟು ಪರಿಣಾಮಕಾ-ರಿಯಾಗಿ ತಲುಪಿಸುವ ಸಂಕಲ್ಪ ಮಾಡಲಾಯಿತು. "ಕಲ್ಯಾಣ ಕರ್ನಾಟಕದ ಜನರ ಸುದೀರ್ಘ ಹೋರಾಟ ಮತ್ತು ಆಶೋತ್ತರಗಳಿಗೆ ಗೌರವ ನೀಡುವುದು ನಮ್ಮ ಕರ್ತವ್ಯ. ಸಿಂಧನೂರು ಕ್ಷೇತ್ರ ಸೇರಿದಂತೆ ಇಡೀ ಭಾಗದ ನೀರಾವರಿ ಯೋಜನೆಗಳು, ಕೃಷಿ ವಲಯದ ಪ್ರಗತಿ ಹಾಗೂ ಯುವಕರ ಉದ್ಯೋಗಾವಕಾಶಗಳಿಗೆ ಸರ್ಕಾರ ವಿಶೇಷ ಆದ್ಯತೆ ನೀಡಲಿದೆ.

ಈ ಭಾಗದ ಹಿಂದುಳಿದಿರುವಿಕೆಯನ್ನು ನೀಗಿಸಿ ಸರ್ವಾಂಗೀಣ ಅಭಿವೃದ್ಧಿ ಸಾಧಿಸಲು ನಾವು ಬದ್ಧರಾಗಿದ್ದೇವೆ." ಸಮಾರಂಭದ ಜೊತೆಗೆ ಸಿಂಧನೂರು ಕ್ಷೇತ್ರದ ಗ್ರಾಮೀಣಾಭಿವೃದ್ಧಿ, ರೈತರ ಹಿತರಕ್ಷಣೆ









ಹಾಗೂ ನಾಗರಿಕ ಸೌಲಭ್ಯಗಳ ಸುಧಾರಣೆಗೆ ಸಂಬಂಧಿಸಿದಂತೆ ಸರ್ಕಾರದ ಮಟ್ಟದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಶಾಸಕರು ಸಚಿವರೊಂದಿಗೆ ಸುದೀರ್ಘ ಚರ್ಚೆ ನಡೆಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾಡಳಿತದ ಹಿರಿಯ ಅಧಿಕಾರಿಗಳು, ಜನಪ್ರತಿನಿಧಿಗಳು, ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

ತಾಂಡವಪುರದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮದ ಪ್ರಗತಿ ಪರಿಶೀಲರ ಸಭೆ- ಮತದಾರರ ಪಟ್ಟಿಗೆ ಸೇರ್ಪಡೆ ಅಕ್ಟೋಬರ್ ಆರು ಕಡೆಯ ದಿನಾಂಕ

❑ ನೈಜ್ಯ ದೆಸೆ ನ್ಯೂಸ್

ತಾಂಡವಪುರ ಸೆಪ್ಟೆಂಬರ್ 17 ರಾಜ್ಯದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮ ಎಸ್‌ಐಆರ ಕಾರ್ಯಕ್ರಮ ಬಹಳ ಪ್ರಗತಿಯಲ್ಲಿ ಸಾಗಿದ್ದು ಇಂದು ನಂಜನಗೂಡು ತಾಲೂಕು ಚಿಕ್ಕಯ್ಯ ಛತ್ರ ಹೋಬಳಿ ತಾಂಡವಪುರ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ಗ್ರಾಮಗಳ ಮತದಾರ ಪಟ್ಟಿ ಪರಿಷ್ಕರಣೆಯಲ್ಲಿ ತೊಡಗಿರುವ ಬಿ ಎಲ್ ಓ ಗಳ ಪ್ರಗತಿ ಪರಿಶೀಲನೆ ಸಭೆಯನ್ನು ಪಂಚಾಯತಿಯ ಕಚೇರಿಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಅವರ ಅಧ್ಯಕ್ಷತೆಯಲ್ಲಿ ನಡೆಯಿತು

ಚುನಾವಣಾ ಆಯೋಗದ ಆದೇಶದವರಿಗೆ ರಾಜ್ಯ ಚುನಾವಣಾ ಆಯೋಗದ ಸೂಚನೆಯಂತೆ ಇಂದು ರಾಜ್ಯದ್ಯಂತ



ಮತದಾರರ ಪಟ್ಟಿ ಪರಿಷ್ಕರಣಿ ನಡೆಯುತ್ತಿದ್ದು ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕು, ಚಿಕ್ಕಯ್ಯನ ಛತ್ರ ಹೋಬಳಿ ತಾಂಡವಪುರ ಗ್ರಾಮ ಪಂಚಾಯತಿ ವ್ಯಾಪ್ತಿಯ ಗ್ರಾಮಗಳ ಬಿ ಎಲ್ ಓ ಗಳಿಗೆ ಗ್ರಾಮ ಪಂಚಾಯತಿ ಕಚೇರಿಯಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಹಾಗೂ ಕಂದಾಯ ಇಲಾಖೆಯ ಚುನಾವಣಾ ಅಧಿಕಾರಿ ವೀರೇಶ್ ರವರ ನೇತೃತ್ವದಲ್ಲಿ ಸಭೆ ನಡೆಸಿ ಮತದಾರರ ಪಟ್ಟಿ ಪರಿಷ್ಕರಣೆ ಪ್ರಗತಿ ಬಗ್ಗೆ ಮಾಹಿತಿ ಪಡೆದುಕೊಂಡ ಪ್ರಕಾಶ್ ರವರು ಮತದಾರರಿಗೆ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲು ಚುನಾವಣಾ ಆಯೋಗ ನೀಡಿರುವ ಕೊನೆಯ ದಿನಾಂಕ ಅಕ್ಟೋಬರ್ 6 ಒಳಗೆ ಸೇರ್ಪಡೆ ಮಾಡಿಕೊಳ್ಳಲು ಕೊನೆಯ ದಿನಕ್ಕೆ ನಿಗದಿ ಮಾಡಿಯಾಗಿದ್ದು

ಅಲ್ಲಿಯವರೆಗೆ ಮತದಾರರು ತಮ್ಮ ಸರಿಯಾದ ದಾಖಲೆಗಳನ್ನು ಬಿ ಎಲ್ ಓ ಗಳಿಗೆ ನೀಡಿ ಸೇರ್ಪಡೆ ಮಾಡಿಕೊಳ್ಳಲು ಮಾಹಿತಿಯನ್ನು ನೀಡಿ ನಾವು ಕೂಡ ಮಾಹಿತಿಯನ್ನು ನೀಡುತ್ತೇವೆ ಎಂದು ಪ್ರಕಾಶ್ ರವರು ತಿಳಿಸಿದರು ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿಯ ಅಭಿವೃದ್ಧಿ ಅಧಿಕಾರಿ ಪ್ರಕಾಶ್ ಕಂದಾಯ ಇಲಾಖೆಯ ಚುನಾವಣಾಧಿಕಾರಿ ವೀರೇಶ್ ಕಾರ್ಯದರ್ಶಿ ಕೆಕೆ ಮರಯ್ಯ ಪಂಚಾಯಿತಿ ಲೆಕ್ಕ ಸಹಾಯಕ ಎಸ್ ಪುಟ್ಟರಾಜು ಹಾಗೂ ಬಿ ಎಲ್ ಓ ಗಳು ಪಂಚಾಯಿತಿ ಸಿಬ್ಬಂದಿ ವರ್ಗದವರು ಹಾಜರಿದ್ದರು

ದೇವದುರ್ಗದ ಬಳಕೆದಾರರ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಯಶಸ್ವಿ
ಸಮಾಜಮುಖಿ ಕಾರ್ಯಗಳಿಗೆ ಆದ್ಯತೆ ನೀಡಿ: ಅಧ್ಯಕ್ಷ ಜಿ. ಬಸವರಾಜ್ ಕರೆ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ಪಟ್ಟಣದ ಬಳಕೆದಾರರ ಸಹಕಾರ ಸಂಘ ನಿಯಮಿತ (ರಿ.), ದೇವದುರ್ಗ ಇದರ 2025?26ನೇ ಸಾಲಿನ ವಾರ್ಷಿಕ ಸಾಮಾನ್ಯ ಸಭೆಯು ಸೆಪ್ಟೆಂಬರ್ 16ರಂದು ಸಂಘದ ಕಚೇರಿ ಆವರಣದಲ್ಲಿ ಯಶಸ್ವಿಯಾಗಿ ನಡೆಯಿತು.

ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಂಘದ ಅಧ್ಯಕ್ಷ ಜಿ. ಬಸವರಾಜ್ ಅವರು, ಸಹಕಾರ ಸಂಘಗಳು ಕೇವಲ ಆರ್ಥಿಕ ಚಟುವಟಿಕೆಗಳಿಗೆ ಸೀಮಿತವಾಗದೆ, ಸದಸ್ಯರು ಹಾಗೂ ಸಾರ್ವಜನಿಕರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಸಮಾಜಮುಖಿ ಸೇವಾ ಕಾರ್ಯಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.



ಸಂಘವು ಸದಸ್ಯರ ವಿಶ್ವಾಸಕ್ಕೆ ಪಾತ್ರವಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವ ಮೂಲಕ ತಾಲೂಕಿನಾದ್ಯಂತ ಮಾದರಿ ಸಹಕಾರ ಸಂಘವಾಗಿ ರೂಪುಗೊಳ್ಳಬೇಕು. ಇದಕ್ಕಾಗಿ ಸಂಘದ ಪ್ರತಿಯೊಬ್ಬ ಸದಸ್ಯರ ಸಹಕಾರ, ಸಲಹೆ ಹಾಗೂ ಸಕ್ರಿಯ ಭಾಗವಹಿಸುವಿಕೆ ಅಗತ್ಯವಾಗಿದೆ ಎಂದು ಅವರು ತಿಳಿಸಿದರು.

ಸಭೆಯಲ್ಲಿ ಸಂಘದ ಉಪಾಧ್ಯಕ್ಷ ವಿಶ್ವನಾಥ್ ಸಾರು, ಕಾರ್ಯದರ್ಶಿ ನಾಗೇಂದ್ರ ಸೇರಿದಂತೆ ನಿರ್ದೇಶಕ ಮಂಡಳಿಯ ಸದಸ್ಯರು ಉಪಸ್ಥಿತರಿದ್ದರು. ಸಭೆಯಲ್ಲಿ ಸಂಘದ ಕಳೆದ ಸಾಲಿನ ಆಯವ್ಯಯ, ಲೆಕ್ಕಪತ್ರಗಳು ಹಾಗೂ ವಿವಿಧ ಲೆಕ್ಕಶೀರ್ಷಿಕೆಗಳನ್ನು ಮಂಡಿಸಿ ಚರ್ಚಿಸಲಾಯಿತು. ಇದೇ ವೇಳೆ ಸಂಘದ ಮುಂದಿನ ವರ್ಷದ ಕಾರ್ಯಚಟುವಟಿಕೆಗಳು, ಸದಸ್ಯ-ರಿಗೆ ನೀಡಬಹುದಾದ ಸೇವೆಗಳನ್ನು ಮತ್ತಷ್ಟು ಸುಧಾರಿಸುವುದು ಹಾಗೂ ಸಂಘದ ಸಮಗ್ರ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸದಸ್ಯರೊಂದಿಗೆ ವಿಸ್ತೃತವಾಗಿ ಚರ್ಚಿಸಲಾಯಿತು. ವಿವಿಧ ವಿಷಯಗಳ ಕುರಿತು ಸದಸ್ಯರು ತಮ್ಮ ಸಲಹೆಗಳನ್ನು ನೀಡಿದ್ದು, ಸಭೆಯಲ್ಲಿ ಹಲವು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು.

ಸಂಘದ ಮಾಜಿ ಅಧ್ಯಕ್ಷ ಹನುಮಂತಪ್ಪ ಅಕ್ಕರಕಿ ಹಾಗೂ ಮುಖಂಡ ಶಿವರಾಜ್ ರುದ್ರಾಕ್ಷಿ ಮಾತನಾಡಿ, ಬಳಕೆದಾರರ ಸಹಕಾರ ಸಂಘವು ಇದೇ ರೀತಿಯಲ್ಲಿ ಸದಸ್ಯರ ಹಿತಾಸಕ್ತಿಗೆ ಆದ್ಯತೆ ನೀಡಿ ಇನ್ನಷ್ಟು ಪ್ರಗತಿ ಸಾಧಿಸಲಿ ಎಂದು ಶುಭ ಹಾರೈಸಿದರು.

ಸಭೆಯಲ್ಲಿ ಸಂಘದ ನಿರ್ದೇಶಕರು, ಸಿಬ್ಬಂದಿ ವರ್ಗ ಹಾಗೂ ನೂರಾರು ಸದಸ್ಯರು ಉತ್ಸಾಹದಿಂದ ಭಾಗವಹಿಸಿದ್ದರು. ಸದಸ್ಯರ ಸಕ್ರಿಯ ಪಾಲ್ಗೊಳ್ಳುವಿಕೆ ಹಾಗೂ ಸಹಕಾರದೊಂದಿಗೆ ವಾರ್ಷಿಕ ಮಹಾಸಭೆ ಯಶಸ್ವಿಯಾಗಿ ಸಂಪನ್ನಗೊಂಡಿತು.

ನೇಮಕಾತಿ ಪ್ರಕಟಣೆ

KFD ನೇಮಕಾತಿ 2026 – 750 ಅರಣ್ಯ ವೀಕ್ಷಕ (Forest Observer) ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ

ಸೆಪ್ಟೆಂಬರ್ 8, 2026 । ಲೇಖಕರು: ಶಶಿ

KFD ನೇಮಕಾತಿ 2026: 750 ಅರಣ್ಯ ವೀಕ್ಷಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಕರ್ನಾಟಕ ಅರಣ್ಯ ಇಲಾಖೆಯು ಜುಲೈ 2026ರ ಅಧಿಕೃತ ಅಧಿಸೂಚನೆಯ ಮೂಲಕ ಅರಣ್ಯ ವೀಕ್ಷಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕರ್ನಾಟಕ ಸರ್ಕಾರದಲ್ಲಿ ಉದ್ಯೋಗವನ್ನು ಬಯಸುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 07 ಸೆಪ್ಟೆಂಬರ್ 2026 ರೊಳಗೆ (ಅಂತಿಮ ದಿನಾಂಕವನ್ನು 30–09–2026 ರವರೆಗೆ ವಿಸ್ತರಿಸಲಾಗಿದೆ) ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಅಧಿಕೃತ ವೆಬ್‌ಸೈಟ್: aranya.gov.in

ಕಂಪ್ಲಿಯಲ್ಲಿ ನಡೆದ ವಿಶ್ವಕರ್ಮ ಜಯಂತಿ ಆಚರಣೆ

ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಪಟ್ಟಣದ ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ತಾಲೂಕು ಆಡಳಿತ ಹಾಗೂ ವಿಶ್ವಕರ್ಮ ಸಮಾಜದ ಸಹಯೋಗದಲ್ಲಿ ವಿಶ್ವಕರ್ಮ ಜಯಂತಿಯನ್ನು ಸಂಭ್ರಮ ಸಡಗರದಿಂದ ಗುರುವಾರದಂದು ಆಚರಿಸಲಾಯಿತು.



ತಹಶೀಲ್ದಾರ್ ಜೂಗಲ್ ಮಂಜುನಾಯಕ ಮಾತನಾಡಿ, ವಿಶ್ವಕರ್ಮ ಸಮುದಾಯವು ಕಲೆ ಮತ್ತು ವಾಸ್ತುಶಿಲ್ಪ ಕ್ಷೇತ್ರಕ್ಕೆ ಅವಿಸ್ಮರಣೀಯ ಕೊಡುಗೆ ನೀಡಿದೆ. ಪ್ರತಿನಿತ್ಯ ಜನರು ಬಳಸುವ ಕರಕುಶಲ ಸಾಮಗ್ರಿಗಳು, ಲೋಹ, ಕಬ್ಬಿಣ, ದೇವರ ವಿಗ್ರಹ, ಚಿತ್ರಪಟಗಳು, ಗೃಹಬಳಕೆ ವಸ್ತುಗಳು, ಸ್ಮಾರಕಗಳ ನಿರ್ಮಾಣದ ಕಾರ್ಯದಲ್ಲಿ ವಿಶ್ವಕರ್ಮರ ಕಲೆಯ ಜೀವಂತಿಕೆಯ ಅಸ್ತಿತ್ವವನ್ನು ಇಂದಿಗೂ ಉಳಿಸಿರುವುದೇ ಸಾಕ್ಷಿ. ಲೋಕವನ್ನು ವೈಭವೀಕರಿಸುವ ಸಾಂಸ್ಕೃತಿಕ ಪರಂಪರೆ, ಕಲೆ ಮತ್ತು ವಾಸ್ತುಶಿಲ್ಪ ಕ್ಷೇತ್ರಕ್ಕೆ ವಿಶ್ವಕರ್ಮರ ಕೊಡುಗೆ ಅಪಾರವಾಗಿದೆ' ಎಂದರು. ನಂತರ ವಿಶ್ವಕರ್ಮ ಸಮಾಜದ ಪ್ರಧಾನ ಕಾರ್ಯದರ್ಶಿ ಡಿ.ಮೌನೇಶ್ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಸಹ ವಿಶ್ವಕರ್ಮ ಜಯಂತ್ಯೋತ್ಸವವನ್ನು ಸಂಭ್ರಮದ ಜೊತೆಗೆ ಅರ್ಥಪೂರ್ಣವಾಗಿ ಆಚರಿಸಲಾಯಿತು. ಇಲ್ಲಿನ ಕಾಳಿಕಾಕಮಠೇಶ್ವರ ದೇವಸ್ಥಾನದಲ್ಲಿ ಮತ್ತು ಪಟ್ಟಣದ ಜಕಣಾಚಾರ್ಯ ವೃತ್ತದಲ್ಲಿ ಮತ್ತು ಪುರಸಭೆ ಕಚೇರಿಯಲ್ಲಿ ಜಯಂತಿ ಆಚರಿಸಲಾಯಿತು ಎಂದರು. ಈ ಸಂದರ್ಭದಲ್ಲಿ ಶಿರಸ್ತೇದಾರ ಪಂಪಾಪತಿ ಇಸಿಓ ರೇವಣ್ಣ, ವಿಶ್ವಕರ್ಮ ಸಮಾಜದ ಅಧ್ಯಕ್ಷ ರುದ್ರಪ್ಪ ಆಚಾರ್, ಪ್ರಧಾನ ಕಾರ್ಯದರ್ಶಿ ಡಿ.ಮೌನೇಶ, ಮಹಿಳಾ ಸಂಘದ ಅಧ್ಯಕ್ಷೆ ಡಿ.ವೀಣ, ಪ್ರಧಾನ ಕಾರ್ಯದರ್ಶಿ ಸವಿತಾ, ಮುಖಂಡರಾದ ರಾಮಚಂದ್ರ ಆಚಾರ್, ಡಿ.ಕಾಳಾಚಾರ್, ಡಿ.ರಾಘವೇಂದ್ರ, ಕೆ.ರಾಘವೇಂದ್ರ, ಅಳ್ಳಳ್ಳಿ ಮೌನೇಶ, ವಿಜಯಕುಮಾರ, ಗುರುಮೂರ್ತಿ, ನಾರಾಯಣ ಆಚಾರ್, ಮಂಜುನಾಥ ಆಚಾರ್ ಸೇರಿದಂತೆ ಸಮಾಜದವರು, ಸಿಬ್ಬಂದಿಗಳು ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

ಜಾಲಹಳ್ಳಿಯಲ್ಲಿ 2 ಕೋಟಿ ವೆಚ್ಚದಲ್ಲಿ ರಸ್ತೆ ವಿಭಜಕ ನಿರ್ಮಾಣಕ್ಕೆ ಪ್ರಸ್ತಾವನೆ

ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ಸಂಚಾರ ವ್ಯವಸ್ಥೆಯನ್ನು ಸುಧಾರಿಸುವ ಉದ್ದೇಶದಿಂದ ಜಾಲಹಳ್ಳಿಯಲ್ಲಿ 2 ಕೋಟಿ ವೆಚ್ಚದಲ್ಲಿ ರಸ್ತೆ ವಿಭಜಕ (ಡಿವೈಡರ್) ನಿರ್ಮಾಣಕ್ಕೆ ಪ್ರಸ್ತಾವನೆ ಸಿದ್ಧಪಡಿಸಲಾಗಿದ್ದು, ಯೋಜನೆ ಅನುಷ್ಠಾನಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ.

ಮಂಗಳವಾರ ಜಂಟಿ ಸ್ಥಳ ಪರಿಶೀಲನೆ ಅತಿಕ್ರಮಣ ತೆರವು ಕಾರ್ಯಾಚರಣೆಗೆ ಮುನ್ನ ಲೋಕೋಪಯೋಗಿ ಇಲಾಖೆ, ಗ್ರಾಮ ಪಂಚಾಯಿತಿ ಹಾಗೂ ಪೊಲೀಸ್ ಇಲಾಖೆ ಅಧಿಕಾರಿಗಳು ಮಂಗಳವಾರ ಜಂಟಿಯಾಗಿ ಸ್ಥಳ ಪರಿಶೀಲನೆ ನಡೆಸಲಿದ್ದಾರೆ. ಈ



ವೇಳೆ ರಾಜ್ಯ ಹೆದ್ದಾರಿಯ ಗಡಿರೇಖೆಯನ್ನು ಗುರುತಿಸಿ, ರಸ್ತೆ ಮತ್ತು ಚರಂಡಿ ವ್ಯಾಪ್ತಿಯ ಜಾಗವನ್ನು ಪರಿಶೀಲಿಸಲಾಗುವುದು. ಗಡಿರೇಖೆ ಗುರುತಿಸಿದ ಬಳಿಕ ಅತಿಕ್ರಮಣ ಮಾಡಿಕೊಂಡಿರುವವರಿಗೆ ನಿಯಮಾನುಸಾರ ನೋಟಿಸ್ ಜಾರಿ ಮಾಡಲಾಗುವುದು. ನೋಟಿಸ್ ನೀಡಿದ ನಂತರವೂ ಅತಿಕ್ರಮಣವನ್ನು ಸ್ವಯಂಪ್ರೇರಿತವಾಗಿ ತೆರವುಗೊಳಿಸದಿದ್ದರೆ, ಕಾನೂನುಬದ್ಧವಾಗಿ ತೆರವು ಕಾರ್ಯಾಚರಣೆ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಸ್ತೆ ವಿಭಜಕ ನಿರ್ಮಾಣದಿಂದ ಪಟ್ಟಣದ ಸಂಚಾರ ವ್ಯವಸ್ಥೆ ಸುಧಾರಿಸುವುದರ ಜೊತೆಗೆ ವಾಹನಗಳ ಸುಗಮ ಸಂಚಾರಕ್ಕೂ ಅನುಕೂಲವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಸಭೆಯಲ್ಲಿ ಲೋಕೋಪಯೋಗಿ ಇಲಾಖೆಯ ಎಇಇ ಶ್ರೀನಿವಾಸ ನಾಯಕ, ಎಂಜಿನಿಯರ್ ಅಲ್ಲಾಬಕ್ಸ್, ಗ್ರಾಮ ಪಂಚಾಯಿತಿ ಪಿಡಿಒ ಲಕ್ಷ್ಮೀ ಅಷ್ಟಗಿ, ಕಾರ್ಯದರ್ಶಿ ಅಯ್ಯಪ್ಪ, ಪೊಲೀಸ್ ಇಲಾಖೆಯ ಪಿಎಸ್‌ಐ ವೈಶಾಲಿ ಝುಳಕಿ ಸೇರಿದಂತೆ ದುರುಗಪ್ಪ ರಾಂಪಳ್ಳಿ, ವೀರೇಶ್ ಅರಕೇರಾ, ಮೌನೇಶ್ ದೇಸಾಯಿ, ಮಲ್ಲಿಕಾರ್ಜುನ್ ಮತ್ತಿತರರು ಉಪಸ್ಥಿತರಿದ್ದರು.

ಮೌಲಾನಾ ಆಜಾದ್ ಶಾಲೆ ನೂತನ ಕಟ್ಟಡಕ್ಕೆ ಅಧಿಕಾರಿಗಳಿಂದ ಸ್ಥಳ ಪರಿಶೀಲನೆ

ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ಪಟ್ಟಣದ ಸರ್ಕಾರಿ ಮೌಲಾನಾ ಆಜಾದ್ ಶಾಲೆಗೆ ನೂತನ ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣಕುಮಾರ ಹಾಗೂ ಅಧಿಕಾರಿಗಳ ತಂಡ ಬುಧವಾರ ಸ್ಥಳ ಪರಿಶೀಲನೆ ನಡೆಸಿತು.

ಜಾಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ವೆ ನಂ.131//ರಲ್ಲಿ ಗೋಪಾಲಕೃಷ್ಣ ತಂದೆ ವೇಂಕೋಬರಾಯ ಮೇಟಿ ಅವರ ಲೇಔಟ್‌ನಲ್ಲಿ ನಾಗರಿಕ ಸೌಲಭ್ಯಕ್ಕಾಗಿ ಮೀಸಲಿಟ್ಟಿರುವ 100100 ಅಡಿ ಜಾಗವನ್ನು ಅಧಿಕಾರಿಗಳು ಪರಿಶೀಲಿಸಿದರು.

ಈ ಹಿಂದೆ ಸರ್ವೆ ನಂ.132/2/2ರ ಲೇಔಟ್‌ನಲ್ಲಿ ಶಾಲಾ ಕಟ್ಟಡ ನಿರ್ಮಾಣಕ್ಕಾಗಿ ಸ್ಥಳ ಪರಿಶೀಲನೆ ನಡೆಸಲಾಗಿತ್ತು. ಆಗ ಶಾಲೆಯಲ್ಲಿ 6ರಿಂದ 10ನೇ ತರಗತಿವರೆಗೆ ಮಾತ್ರ ತರಗತಿಗಳು ನಡೆಯುತ್ತಿದ್ದ ಹಿನ್ನೆಲೆಯಲ್ಲಿ ಆ ಜಾಗವನ್ನು ಪರಿಗಣಿಸಲಾಗಿತ್ತು. ಇದೀಗ ಶಾಲೆಯನ್ನು ಕೆಪಿಎಸ್‌ಸಿ ಶಾಲೆಯಾಗಿ ಮೇಲ್ದರ್ಜೆಗೇರಿಸಿರುವುದರಿಂದ, ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಅಗತ್ಯ ಸೌಲಭ್ಯಗಳಿಗೆ ಅನುಗುಣವಾಗಿ ಸರ್ವೆ ನಂ.132/2/2ರ ಜಾಗ ಸಾಕಾಗುವುದಿಲ್ಲ ಎಂದು ಜಿಲ್ಲಾ ಅಧಿಕಾರಿ ಪ್ರವೀಣಕುಮಾರ ತಿಳಿಸಿದರು.

ಈ ಹಿನ್ನೆಲೆಯಲ್ಲಿ ಸರ್ವೆ ನಂ.131/*/*ರಲ್ಲಿ ನಾಗರಿಕ ಸೌಲಭ್ಯಕ್ಕಾಗಿ ಮೀಸಲಿಟ್ಟಿರುವ 100100 ಅಡಿ ಜಾಗವನ್ನು ಪರಿಶೀಲಿಸಲಾಗಿದ್ದು, ನೂತನ ಶಾಲಾ ಕಟ್ಟಡ ನಿರ್ಮಾಣಕ್ಕೆ ಈ ಸ್ಥಳ ಸೂಕ್ತವಾಗಿದೆ ಎಂದು ಅವರು ತಿಳಿಸಿದರು. ಗ್ರಾಮ ಪಂಚಾಯಿತಿ ಅಧಿಕಾರಿಗಳು ಜಾಗಕ್ಕೆ ಸಂಬಂಧಿಸಿದ ಅಗತ್ಯ ದಾಖಲೆಗಳನ್ನು ಇಲಾಖೆಗೆ ಸಲ್ಲಿಸಿದ ಬಳಿಕ, ಒಂದು ತಿಂಗಳೊಳಗೆ ನೂತನ ಶಾಲಾ ಕಟ್ಟಡ ನಿರ್ಮಾಣ ಕಾಮಗಾರಿ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು



ಜಿಲ್ಲಾ ಅಧಿಕಾರಿ ಪ್ರವೀಣಕುಮಾರ ಹೇಳಿದರು.

ಈ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿ ನರಸಿಂಹ, ಗ್ರಾಮ ಪಂಚಾಯಿತಿ ಪಿಡಿಒ ಲಕ್ಷ್ಮೀ ಅಷ್ಟಗಿ, ಕಾರ್ಯದರ್ಶಿ ಅಯ್ಯಪ್ಪ, ಶಾಲೆಯ ಮುಖ್ಯೋಪಾಧ್ಯಾಯ ರಮೇಶ ಮ್ಯಾಗೇರಿ, ಮುಖಂಡರಾದ ಹುಸೇನ್ ನಾಶಿ, ಇಮಾಮ್ ಸಾಬ್, ಮಕ್ತುಮ್, ಸಂಘಟನೆಯ ಮುಖಂಡರಾದ ಶಬ್ಬೀರ್, ಮಹಾಲಿಂಗ ದೊಡ್ಡಮನಿ, ಮೌನೇಶ ದಾಸರ ಹಾಗೂ ಗ್ರಾಮ ಪಂಚಾಯಿತಿ ಸದಸ್ಯ ಅಬ್ದುಲ್ ರಹೀಮಾನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕ ದಿನ ಧ್ವಜಾರೋಹಣ

ರೋಗಿಗಳ ಆರೈಕೆಯನ್ನು ಸುರಕ್ಷಿತವಾಗಿಸಲು ಪಣತೊಡೋಣ:ಡಾ ನಂದಿತಾ.

ನೈಜ್ಯ ದೆಸೆ ನ್ಯೂಸ್

ರಾಯಚೂರು: ರೋಗಿಗಳ ಆರೈಕೆಯಲ್ಲಿ ಉಂಟಾಗುವ ದೋಷಗಳನ್ನು ಸಕಾಲದಲ್ಲಿ ಗುರ್ತಿಸಿ ಗುಣಮಟ್ಟದ ಚಿಕಿತ್ಸೆಯ ಮಾರ್ಗಗಳನ್ನು ಕಂಡುಕೊಂಡು ಅನುಷ್ಟಾನ ಮಾಡುವ ದಿಶೆಯಲ್ಲಿ ಎಲ್ಲರೂ ಭಾಗಿಯಾಗೋಣವೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ನಂದೀತಾ ಎಮ್ ಎನ್ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ದಿನದ ಅಂಗವಾಗಿ ಧ್ವಜಾರೋಹಣ ನೇರವೇರಿಸಿ ಮಾತನಾಡುತ್ತಾ, ಸ್ವಾತಂತ್ರ್ಯ ನಂತರದಲ್ಲಿ ಹೈದ್ರಾಬಾದ್ ನಿಜಾಮರ ಆಳ್ವಿಕೆಯಲ್ಲಿ ಇದ್ದ ಈ ಭಾಗವನ್ನು 1948 ಸಪ್ಟಂಬರ 17 ರಂದು ಭಾರತದೊಂದಿಗೆ ವಿಲೀನಗೊಳಿಸಲಾಯಿತು. ಪ್ರಸ್ತುತ ಕಲ್ಯಾಣ ಕರ್ನಾಟಕ ಭಾಗದಲ್ಲಿ ರಾಯಚೂರು ಜಿಲ್ಲೆಯನ್ನು ಅರೋಗ್ಯ ಸೇವೆಗಳ ಗುಣಮಟ್ಟದಲ್ಲಿ ಯಾವುದೇ ರಾಜಿಯಿಲ್ಲದೆ ಆರೋಗ್ಯ ಸೇವೆಯನ್ನು ಒದಗಿಸೋಣ

ವಿಶ್ವ ರೋಗಿಗಳ ಸುರಕ್ಷತಾ ದಿನ ಪ್ರತಿಜ್ಞೆ: ಸದರಿ ದಿನಾಚರಣೆಯೊಂದಿಗೆ ಇಂದು ಜಾಗತಿಕವಾಗಿ ರೋಗಿಗಳ ಆರೈಕೆಯಲ್ಲಿ ಪಾಲಕರಿಗೆ ಹಾಗೂ ಆಸ್ಪತ್ರೆಯಲ್ಲಿಯ ಅರೆ ವೈದ್ಯಕೀಯ ಸಿಬ್ಬಂದಿಯವರಿಗೆ ಔಷಧಿ, ಪರಿಕರಗಳ ಬಳಕೆಯ ತಾಂತ್ರಿಕ ಕೌಶಲ್ಯಗಳ ಬಗ್ಗೆ ನಿರಂತರವಾಗಿ ಬೆಂಬಲ, ನೆರವು ನೀಡುವ ಕಾರ್ಯವನ್ನು ತಜ್ಞರಿಂದ ಮಾಡಿಸುವುದಕ್ಕೆ ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.



ವೈದ್ಯರಿಂದ ಹಿಡಿದು ಸ್ವಚ್ಚತಾ ಸಿಬ್ಬಂದಿಯವರೆಗೂ ತಮ್ಮ ಆಸ್ಪತ್ರೆಗೆ ಚಿಕಿತ್ಸೆ ಆಗಮಿಸುವ ಪ್ರತಿಯೊಬ್ಬರಿಗೂ ಗೌರವಿಸಿ ಸೌಜನ್ಯಯುತವಾಗಿ ಚಿಕಿತ್ಸೆ ನೀಡೋಣ. ಕ್ಷೇತ್ರ ಮಟ್ಟದಲ್ಲಿ ಮಕ್ಕಳಿಗೆ ಯಾವುದೆ ಲಸಿಕೆ ವಂಚಿತವಾಗದಂತೆ ನಿಗಾವಹಿಸೋಣ. ಸೊಳ್ಳೆಯಿಂದ ಹರಡುವ ಡೆಂಗ್ಯು ಚಿಕುನ್ಯಗುನ್ಯಾ, ಮಲೇರಿಯಾ, ಹಾಗೂ ಕ್ಷಯರೋಗ, ಕುಷ್ಠರೋಗದಂತಹ ಹಾಗೂ ವಾಂತಿಬೇದಿಯಂತಹ ಸಾಂಕ್ರಾಮಿಕ ರೋಗಗಳನ್ನು ಹಾಗೂ ರಕ್ತದೊತ್ತಡ, ಮಧುಮೇಹ, ಕ್ಯಾನ್ಸರ್ ಸೇರಿದಂತೆ ಇತರೆ ಅಸಾಂಕ್ರಾಮಿಕ ರೋಗಗಳ ನಿಯಂತ್ರಣದ ಕಾರ್ಯವನ್ನು ಪ್ರತಿಯೊಬ್ಬರ ಬೆಂಬಲದೊಂದಿಗೆ ಈಗಿನಂತೆ ಮುಂದುವರೆಸೋಣ, ಹೆಚ್‌ಐವಿಯ ಸ್ಥಿತಿಗತಿಯನ್ನು ಸ್ವಯಂ ಗುರ್ತಿಸುವ ಮೋಬಲೈಷೆನ್ ಕಾರ್ಯವನ್ನು ಪರಿಣಾಮಕಾರಿ ಯಾಗಿಸೋಣ.

ಹೆಚ್ಚು ಹೆಚ್ಚು ಜಾಗೃತಿಗಾಗಿ ಸಾರ್ವಜನಿಕರ ಸಹಭಾಗಿತ್ವವನ್ನು ಹೆಚ್ಚಿಸುವ ಉದ್ದೇಶದಿಂದ ಸಾಮಾಜಿಕ ಜಾಲತಾಣಗಳು, ಪತ್ರಿಕೆಗಳು ಹಾಗೂ ಇತರ ಮಾಧ್ಯಮಗಳ ಮೂಲಕ ಪರಿಣಾಮಕಾರಿ ಪ್ರಚಾರ ಕಾರ್ಯಕೈಗೊಳ್ಳಲು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ ಗಣೇಶ್ ಕೆ, ಜಿಲ್ಲಾ ಕುಟುಂಬ ಕಲ್ಯಾಣ ಕಾರ್ಯಕ್ರಮ ಅಧಿಕಾರಿ ಡಾ ಶಿವಕುಮಾರ ನಾರಾ, ತಾಲೂಕಾ ಆರೋಗ್ಯಾಧಿಕಾರಿ ಡಾ ಸತೀಶ್, ಡಿಹೆಚ್‌ಇಓ ಈಶ್ವರ ದಾಸಪ್ಪನವರ, ಡಿವೈಹೆಚ್‌ಇಓ ಬಸಯ್ಯ, ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ಪುಂಡಲಿಕ ಗಂಜಿ, ಕಚೇರಿ ಅಧಿಕ್ಷಕರು ಸುಧಾರಾಣಿ ಸೇರಿದಂತೆ ಎಲ್ಲ ವಿಭಾಗಗಳ ಅಧಿಕಾರಿಗಳು, ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕಲ್ಯಾಣ ಕರ್ನಾಟಕದ ವೈಭವ ಸಾರಿದ ಉತ್ಸವ: ಗಂಗಾಬಾಯಿ ಅಭಿಪ್ರಾಯ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಕಲ್ಯಾಣ ಕರ್ನಾಟಕ ಉತ್ಸವವು ಈ ಭಾಗದ ಇತಿಹಾಸ, ಪರಂಪರೆ, ಸಂಸ್ಕೃತಿ, ಸಾಹಿತ್ಯ ಹಾಗೂ ಸಾಮಾಜಿಕ ಬದುಕಿನ ವೈಭವವನ್ನು ಸ್ಮರಿಸುವ ಮಹತ್ವದ ಕಾರ್ಯಕ್ರಮವಾಗಿದೆ ಎಂದು ಇತಿಹಾಸ ವಿಭಾಗದ ಮುಖ್ಯಸ್ಥರಾದ ಗಂಗಾಬಾಯಿ ಅಭಿಪ್ರಾಯಪಟ್ಟರು.

ತಾಲೂಕಿನ ತುರ್ವಿಹಾಳ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಾಂಸ್ಕೃತಿಕ ಸಮಿತಿಯ ಅಡಿಯಲ್ಲಿ ನಡೆದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯಲ್ಲಿ ವಿಶೇಷ ಉಪನ್ಯಾಸಕರಾಗಿ ಭಾಗವಹಿಸಿ ಮಾತನಾಡಿ, ಈ ಹಿಂದೆ ಹೈದರಾಬಾದ್ ಕರ್ನಾಟಕ ಎಂದು ಕರೆಯಲ್ಪಡುತ್ತಿದ್ದ ಪ್ರದೇಶವು 2019ರಲ್ಲಿ "ಕಲ್ಯಾಣ ಕರ್ನಾಟಕ" ಎಂಬ ಹೆಸರನ್ನು ಪಡೆದುಕೊಂಡಿತು. ಸೆ.17ರಂದು ಆಚರಿಸಲಾಗುವ ಕಲ್ಯಾಣ ಕರ್ನಾಟಕ ಉತ್ಸವ ಈ ಭಾಗದ ಜನರ ಹೋರಾಟ ಐತಿಹಾಸಿಕ ಬೆಳವಣಿಗೆಯನ್ನು ಸ್ಮರಿಸುವ ಸಂದರ್ಭವಾಗಿದೆ.

ಕಲ್ಯಾಣ ಕರ್ನಾಟಕವು ರಾಯಚೂರು, ಕಲಬುರ್ಗಿ, ಬೀದರ್, ಕೊಪ್ಪಳ, ಬಳ್ಳಾರಿ, ವಿಜಯನಗರ ಮತ್ತು ಯಾದಗಿರಿ ಜಿಲ್ಲೆಗಳನ್ನು ಒಳಗೊಂಡಿದೆ. ಈ ಪ್ರದೇಶವು ರಾಷ್ಟ್ರಕೂಟರು, ಕಲ್ಯಾಣಿ ಚಾಲುಕ್ಯರು, ಸೇರಿದಂತೆ ಹಲವು ರಾಜಮನೆತನಗಳ ಆಳ್ವಿಕೆಗೆ ಸಾಕ್ಷಿಯಾಗಿದೆ. ಬಸವಣ್ಣನವರ ಅನುಭವ ಮಂಟಪ, ವಚನ



ಸಾಹಿತ್ಯ, ದಾಸ ಸಾಹಿತ್ಯ ಹಾಗೂ ಶರಣರ ಪರಂಪರೆ ಈ ಭಾಗದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಹೆಚ್ಚಿಸಿವೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಖಾದರ್ ಭಾಷಾ ಮಾತನಾಡಿ, ವಿದ್ಯಾರ್ಥಿಗಳು ಮತ್ತು ಯುವಜನರಲ್ಲಿ ಈ ಭಾಗದ ಇತಿಹಾಸ ಹಾಗೂ ಪರಂಪರೆ ಅಭಿವೃದ್ಧಿ ಬಗ್ಗೆ ಅರಿವು ಮೂಡಿಸಲು ಉತ್ಸವ ಮಹತ್ವದ್ದಾಗಿದೆ. ಕಲ್ಯಾಣ ಕರ್ನಾಟಕದ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ, ಮೂಲಸೌಕರ್ಯ, ಅಭಿವೃದ್ಧಿಗೆ ಹೊಸ ಸಂಕಲ್ಪ ಕೈಗೊಳ್ಳುವುದು ಈ ಆಚರಣೆಯ ಪ್ರಮುಖ ಆಶಯವಾಗಿದೆ. ಹೀಗಾಗಿ, "ಕಲ್ಯಾಣ ಕರ್ನಾಟಕದ ವೈಭವ ಸಾರಿದ ಉತ್ಸವ" ಎಂಬುದು ಕೇವಲ ಆಚರಣೆಯಲ್ಲ, ನಾಡಿನ ಇತಿಹಾಸವನ್ನು ಸ್ಮರಿಸಿ, ವರ್ತಮಾನವನ್ನು ಅರಿತು, ಉಜ್ವಲ ಭವಿಷ್ಯ ನಿರ್ಮಿಸುವ ಸಂಕಲ್ಪದ ಪ್ರತೀಕವಾಗಿದೆ ಎಂದರು.

ಅತಿಥಿಗಳಾಗಿ ಭಾಗವಹಿಸಿದ ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯ ಜಹಿರುದ್ದಿನಸಾಬ್ ಮಾತನಾಡಿ, ಕಲ್ಯಾಣ ಕರ್ನಾಟಕವು ವಚನ ಸಾಹಿತ್ಯ ಮತ್ತು ಶರಣ ಪರಂಪರೆಯ ಪ್ರಮುಖ ನೆಲೆಯಾಗಿದೆ. ಬಸವಣ್ಣ, ಅಲ್ಲಮಪ್ರಭು, ಅಕ್ಕಮಹಾದೇವಿ ಸೇರಿದಂತೆ ಅನೇಕ ಶರಣರು ಸಾಮಾಜಿಕ ಸಮಾನತೆ, ಕಾಯಕ, ದಾಸೋಹ ಮತ್ತು ಮಾನವೀಯ ಮೌಲ್ಯಗಳನ್ನು ಸಾರಿದರು. ಕನ್ನಡ ಸಾಹಿತ್ಯದ ಬೆಳವಣಿಗೆಯಲ್ಲಿ ಈ ಭಾಗದ ಕೊಡುಗೆ ಗಮನಾರ್ಹವಾಗಿದೆ. ಜನಪದ ಕಲೆಗಳು, ತತ್ವಪದಗಳು, ದಾಸ ಸಾಹಿತ್ಯ, ಜಾನಪದ ಹಾಡುಗಳು ಮತ್ತು ಸ್ಥಳೀಯ ಆಚರಣೆಗಳು ಈ ಪ್ರದೇಶದ ಸಾಂಸ್ಕೃತಿಕ ವೈವಿಧ್ಯವನ್ನು ತೋರಿಸುತ್ತವೆ ಎಂದರು.

ಸಾಂಸ್ಕೃತಿಕ ಸಮಿತಿಯ ಸಂಚಾಲಕ ಮೌಲಾಸಾಬ್ ಹೈದರಾಬಾದ ಕರ್ನಾಟಕ ವಿಮೋಚನಾ ದಿನಾಚರಣೆ ಕುರಿತು ಪ್ರಾಸ್ತಾವಿಕ ನುಡಿಯಲ್ಲಿ ಕಲ್ಯಾಣ ಕರ್ನಾಟಕ ಉತ್ಸವವು "ನಮ್ಮ ಇತಿಹಾಸವನ್ನು ತಿಳಿಯೋಣ, ನಮ್ಮ ಪರಂಪರೆಯನ್ನು ಉಳಿಸೋಣ, ಅಭಿವೃದ್ಧಿಯತ್ತ ಸಾಗೋಣ" ಎಂಬ ಸಂದೇಶವನ್ನು ನೀಡುತ್ತದೆ. ಈ ಭಾಗದ ಜನರ ಏಕತೆ, ಆತ್ಮಗೌರವ, ಅಭಿವೃದ್ಧಿಯ ಆಶಯಗಳನ್ನು ಬಲಪಡಿಸುವಲ್ಲಿ ಉತ್ಸವ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

ಐಕ್ಯೂಎಸಿ ವಿಭಾಗದ ಸಂಚಾಲಕರಾದ ಡಾ. ಚನ್ನಬಸವ ಮಾತನಾಡಿ, ಕಲ್ಯಾಣ ಕರ್ನಾಟಕವು ತನ್ನದೇಯಾದ ಐತಿಹಾಸಿಕ ಮತ್ತು ಸಾಂಸ್ಕೃತಿಕ ವೈಭವವನ್ನು ಹೊಂದಿದ್ದರೂ, ಶಿಕ್ಷಣ, ಉದ್ಯೋಗ, ಆರೋಗ್ಯ, ಕೃಷಿ, ಕೈಗಾರಿಕೆ ಮತ್ತು ಮೂಲಸೌಕರ್ಯ ಕ್ಷೇತ್ರಗಳಲ್ಲಿ ಇನ್ನಷ್ಟು ಅಭಿವೃದ್ಧಿಯ ಅಗತ್ಯವಿದೆ. ಆದ್ದರಿಂದ ಉತ್ಸವವು ಕೇವಲ ಹಿಂದಿನ ಇತಿಹಾಸವನ್ನು ಸ್ಮರಿಸುವ ಕಾರ್ಯಕ್ರಮವಾಗಿದೆ, ಮುಂದಿನ ಅಭಿವೃದ್ಧಿ ಕುರಿತು ಚಿಂತಿಸುವ ವೇದಿಕೆಯಾಗಬೇಕು. ಶಿಕ್ಷಣದ ಗುಣಮಟ್ಟ ಹೆಚ್ಚಿಸುವುದು, ಯುವಜನರಿಗೆ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯೋಗಾವಕಾಶ ಕಲ್ಪಿಸುವುದು, ಕೃಷಿಗೆ ಅಗತ್ಯವಾದ ಸೌಲಭ್ಯಗಳನ್ನು ಒದಗಿಸುವುದು, ಮಹಿಳೆಯರ ಸಬಲೀಕರಣ, ಗ್ರಾಮೀಣ ಪ್ರದೇಶಗಳ ಮೂಲಸೌಕರ್ಯ ಸುಧಾರಣೆ ಮುಂತಾದವುಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ಕಾರ್ಯಕ್ರಮದಲ್ಲಿ ಕಾಲೇಜು ಸದಸ್ಯರಾದ ವೀರಭದ್ರಗೌಡ, ಯಂಕಪ್ಪ, ಬಾಲಾಜಿ, ಶಂಕರಲಿಂಗ, ಬಸವರಾಜ ಸಜ್ಜನ ಹಾಗೂ ಸಹ ಪ್ರಾಧ್ಯಾಪಕರಾದ ಡಾ.ವೆಂಕಟರಮಣ, ಸಹಾಯಕ ಪ್ರಾಧ್ಯಾಪಕರಾದ ಡಾ.ದೇವಿದಾಸ, ಅತಿಥಿ ಉಪನ್ಯಾಸಕರಾದ ಫಕೀರಪ್ಪ ಉಪಸ್ಥಿತರಿದ್ದರು ಕಾಲೇಜಿನ ಎಲ್ಲಾ ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು. ನಿರೂಪಣೆ ಕರಿಯಪ್ಪ, ಸ್ವಾಗತ ಸುಮಿತ್ರಾ, ವಂದನಾರ್ಪಣೆ ಗಂಗಮ್ಮ, ಉಪನ್ಯಾಸಕ ತಿಮ್ಮಯ್ಯ ಪ್ರಾರ್ಥನೆ ಮಾಡಿದರು.

ವಚನ ದರ್ಶನ

ನೀರಿಂಗೆ ನೈದಿಲೆಯೆ ಶೃಂಗಾರ ಸಮುದ್ರಕ್ಕೆ ತೆರೆಯೆ ಶೃಂಗಾರ ನಾರಿಗೆ ಗುಣವೆ ಶೃಂಗಾರ ಗಗನಕ್ಕೆ ಚಂದ್ರಮನೆ ಶೃಂಗಾರ ನಮ್ಮ ಕೂಡಲಸಂಗನ ಶರಣರಿಗೆ ನೊಸಲ ವಿಭೂತಿಯೆ ಶೃಂಗಾರ

12ನೇ ಶತಮಾನದ ಸಾಮಾಜಿಕ ಕ್ರಾಂತಿಕಾರಿ, ವಿಶ್ವಗುರು ಶ್ರೀ ಬಸವಣ್ಣನವರು ಬರೆದಿರುವ ಅತ್ಯಂತ ಜನಪ್ರಿಯ ಹಾಗೂ ಮಾರ್ಮಿಕವಾದ ವಚನವಾಗಿದೆ.

ಈ ವಚನದಲ್ಲಿ ಬಸವಣ್ಣನವರು ಪ್ರಕೃತಿಯ ಸಹಜ ನಿಯಮಗಳನ್ನು ಉದಾಹರಿಸುತ್ತಾ, ಮನುಷ್ಯನಿಗೆ ಹಾಗೂ ಭಕ್ತನಿಗೆ ನಿಜವಾದ ಸೌಂದರ್ಯ ಶೃಂಗಾರ ಯಾವುದು ಎಂಬುದನ್ನು ಸುಂದರವಾಗಿ ವಿವರಿಸಿದ್ದಾರೆ.

ನೀರಿಂಗೆ ನೈದಿಲೆಯೆ ಶೃಂಗಾರ: ಕೇವಲ ನೀರು ತುಂಬಿರುವ ಕೆರೆಗಿಂತ, ಅದರಲ್ಲಿ ಅರಳಿ ನಿಂತಿರುವ ನೈದಿಲೆ ಕಮಲ ನೆಲಕಮಲ ಹೂವು ಆ ನೀರಿಗೆ ಅಸಲಿ ಅಂದವನ್ನು ನೀಡುತ್ತದೆ.

ಸಮುದ್ರಕ್ಕೆ ತೆರೆಯೆ ಶೃಂಗಾರ: ಅಲೆಗಳಿಲ್ಲದ ಸಮುದ್ರ ಜೀವಂತಿಕೆಯಿಲ್ಲದಂತೆ ಕಾಣುತ್ತದೆ. ನಿರಂತರವಾಗಿ ಏಳುವ ಮತ್ತು ಬೀಳುವ ಅಲೆಗಳೇ ತೆರೆ ಸಮುದ್ರದ ನಿಜವಾದ ಸೊಬಗು.

ನಾರಿಗೆ ಗುಣವೆ ಶೃಂಗಾರ: ಮಹಿಳೆಗೆ ಕೇವಲ ಒಡವೆ, ವಸ್ತ್ರಗಳು ಸೌಂದರ್ಯ ತರುವುದಿಲ್ಲ. ಆಕೆಯ ಸದ್ಗುಣ, ವಿವೇಕ ಮತ್ತು ನಡತೆಯೇ ಆಕೆಗೆ ಶ್ರೇಷ್ಠ ಆಭರಣ.

ಗಗನಕ್ಕೆ ಚಂದ್ರಮನೆ ಶೃಂಗಾರ: ಕತ್ತಲ ಕರಗಿಸುವ ಮತ್ತು ಆಕಾಶಕ್ಕೆ ತಂಪು ಬೆಳಕನ್ನು ನೀಡುವ ಚಂದ್ರನೇ ವಿಶಾಲವಾದ ಗಗನಕ್ಕೆ ನಿಜವಾದ ಒಡವೆ.

ಕೂಡಲಸಂಗನ ಶರಣರಿಗೆ ನೊಸಲ ವಿಭೂತಿಯೆ ಶೃಂಗಾರ: ಅದೇ ರೀತಿ, ಶಿವನ ಭಕ್ತರಾದ ಶರಣರಿಗೆ ಹಣೆಯ ಮೇಲಿರುವ ವಿಭೂತಿಯೇ ಭಸ್ಮ ಶೃಂಗಾರ. ಇಲ್ಲಿ 'ವಿಭೂತಿ' ಎಂದರೆ ಕೇವಲ ಭಸ್ಮ ಮಾತ್ರವಲ್ಲ; ಅಹಂಕಾರವನ್ನು ಸುಟ್ಟು ಭಸ್ಮ ಮಾಡಿ, ಪವಿತ್ರ ಹಾಗೂ ಶುದ್ಧ ಮನಸ್ಸಿನಿಂದ ಬದುಕುವ ಶರಣರ ಭಕ್ತಿ ಮತ್ತು ಜ್ಞಾನದ ಸಂಕೇತವಾಗಿದೆ. ಶರಣರ ವಚನಗಳು ಮನುಕುಲದ ದಾರಿದೀಪವಾಗಿವೆ. ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ಕಂಪ್ಲಿ ಕೋಟೆಯ ವಿವೇಕಾನಂದ ಶಾಲೆಯಲ್ಲಿ ಕಲ್ಯಾಣ ಕರ್ನಾಟಕ ಉತ್ಸವ, ವಿಶ್ವಕರ್ಮ ಜಯಂತಿ ಆಚರಣೆ

❏ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಸ್ಥಳೀಯ ಕೋಟೆಯ ಶ್ರೀ ಸ್ವಾಮಿ ವಿವೇಕಾನಂದ ಶಾಲೆಯಲ್ಲಿ ಕಲ್ಯಾಣ ಕರ್ನಾಟಕ ಉತ್ಸವ ಹಾಗೂ ಜಗದ್ಗುರು ಶ್ರೀ ವಿಶ್ವಕರ್ಮ ಜಯಂತಿಯನ್ನು ಅತ್ಯಂತ ಸಡಗರ-ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಶಾಲಾ ಆವರಣದಲ್ಲಿ ಧ್ವಜಾರೋಹಣ



ನೆರವೇರಿಸಿ, ಕಲ್ಯಾಣ ಕರ್ನಾಟಕದ ವಿಮೋಚನೆಗಾಗಿ ಹೋರಾಡಿದ ಮಹನೀಯರನ್ನು ಸ್ಮರಿಸಲಾಯಿತು. ತದನಂತರ ಸೃಷ್ಟಿಕರ್ತ ಶ್ರೀ ವಿಶ್ವಕರ್ಮ ಮಹರ್ಷಿಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಕಿ ಕೆ. ಶ್ವೇತಾ ಅವರು, "ಕಲ್ಯಾಣ ಕರ್ನಾಟಕದ ಇತಿಹಾಸವು ಅತ್ಯಂತ ಹೋರಾಟದಿಂದ ಕೂಡಿದ್ದಾಗಿದೆ. ನಾವೆಲ್ಲರೂ ಈ ದಿನದ ಮಹತ್ವವನ್ನು ಅರಿತುಕೊಳ್ಳಬೇಕು. ಅದರೊಂದಿಗೆ, ದೇಶದ ಕಲೆ, ಶಿಲ್ಪಕಲೆ ಮತ್ತು ತಂತ್ರಜ್ಞಾನಕ್ಕೆ ಜಗದ್ಗುರು ವಿಶ್ವಕರ್ಮ ಮಹರ್ಷಿಗಳ ಕೊಡುಗೆ ಅಪಾರವಾದದ್ದು. ವಿದ್ಯಾರ್ಥಿಗಳು ಇಂತಹ ಮಹನೀಯರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು," ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಆಡಳಿತ ಮಂಡಳಿಯ ಪದಾಧಿಕಾರಿಗಳು, ಮುಖ್ಯಗುರು ಬಿ. ಜಿಲಾನಸಾಬ್, ಸಹ ಶಿಕ್ಷಕಿಯರಾದ ಕೊಲ್ಕರ್ ಜಯಶ್ರೀ, ಜೆ.ಅಕ್ಷತಾ, ಕೊಲ್ಕರ್ ಉಮಾ, ವರ್ಷಾ ಮಜುಮ್ದಾರ್, ಮಠದ ಸುನೀತಾ, ಡಿ.ಉಮಾ, ಖಜಾಬನಿ, ಫಣಿ ಅಮೃತಾ ಹಾಗೂ ಸಹಾಯಕಿ ಶರ್ಮಾಸಬಿ, ಸೇರಿದಂತೆ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

ಭಾವೈಕ್ಯತೆಯ ಪ್ರತೀಕ: ಕಂಪ್ಲಿಯ ಮುಲ್ಲರ್ ಓಣಿಯಲ್ಲಿ ಮೆಹೆಬೂಬ್ ಸುಭಾನಿ ಗ್ಯಾರೇವಿ ಅಂಗವಾಗಿ ಪುರಾಣ ಪ್ರವಚನ ಕಾರ್ಯಕ್ರಮ

❏ ನೈಜ್ಯ ದೆಸೆ ನ್ಯೂಸ್

ಬಳ್ಳಾರಿ / ಕಂಪ್ಲಿ : ಧಾರ್ಮಿಕ ಸೌಜನ್ಯ ಹಾಗೂ ಭಾವೈಕ್ಯತೆಗೆ ಹೆಸರಾಗಿರುವ ಇಲ್ಲಿನ ಮುಲ್ಲರ್ ಓಣಿಯ ಬಡಿಗೇರ್ ವಲಿಸಾಬ್ ಅವರ ನಿವಾಸದಲ್ಲಿ ಹಜರತ್ ಮೆಹೆಬೂಬ್ ಸುಭಾನಿ ಅವರ ಗ್ಯಾರೇವಿ ಷರೀಫ್ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ವಿಶೇಷ ಪುರಾಣ ಪ್ರವಚನ ಕಾರ್ಯಕ್ರಮವು ಸಡಗರ ಹಾಗೂ ಶ್ರದ್ಧಾಭಕ್ತಿಗಳಿಂದ ಜರುಗಿತು.

ಕಾರ್ಯಕ್ರಮದ ಮುಖ್ಯ ಪ್ರವಚನಕಾರರಾಗಿ ಆಗಮಿಸಿದ್ದ ಆಲ್-ಹಾಜಿ ಮೊಹಮ್ಮದ್ ಜಿಯಾವುದ್ದೀನ್ ರಜ್ವಿ ಮಾತನಾಡಿ, "ಸೂಫಿ ಸಂತರು ಮತ್ತು ಶರಣರು ಸಾರಿದ ತತ್ವಗಳು ಜಗತ್ತಿಗೆ ಶಾಂತಿಯ ಮಾರ್ಗವನ್ನು ತೋರಿಸಿವೆ. ಮೆಹೆಬೂಬ್



ಸುಭಾನಿ (ಹಜರತ್ ಅಬ್ದುಲ್ ಖಾದಿರ್ ಜಿಲಾನಿ) ಅವರ ಬೋಧನೆಗಳು ಕೇವಲ ಒಂದು ಧರ್ಮಕ್ಕೆ ಸೀಮಿತವಾಗಿರದೆ, ಇಡೀ ಮಾನವಕುಲದ ಕಲ್ಯಾಣವನ್ನು ಬಯಸುತ್ತವೆ. ಪರಸ್ಪರ ಪ್ರೀತಿ, ದಯೆ ಹಾಗೂ ಸೌಹಾರ್ದತೆಯಿಂದ ಬಾಳುವುದೇ ಪ್ರತಿಯೊಂದು ಧರ್ಮದ ಮೂಲ ಆಶಯವಾಗಿದೆ" ಎಂದರು.

ಮುಖ್ಯ ಅತಿಥಿ ಟಿ. ಮಹಮ್ಮದ್ ಗೌಸ್ ಮಾತನಾಡಿ, "ಕಂಪ್ಲಿ ಭಾಗದಲ್ಲಿ ಇಂತಹ ಧಾರ್ಮಿಕ ಪ್ರವಚನಗಳು ಮತ್ತು ಪುರಾಣಗಳು ನಿರಂತರವಾಗಿ ನಡೆಯುತ್ತಿರುವುದು ನಮ್ಮ ಸಾಂಸ್ಕೃತಿಕ ಮತ್ತು ಸಾಮಾಜಿಕ ಐಕ್ಯತೆಗೆ ಹಿಡಿದ ಕೈಗನ್ನಡಿಯಾಗಿದೆ" ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮುಖಂಡರಾದ ಬಡಿಗೇರ್ ವಲಿಸಾಬ್, ಮೊಹಮ್ಮದ್ ಗುಲಾಬ್, ಬೇಕರಿ ನೌಷಾದಸಾಬ್, ಗುಜರಿ ಮಹಮ್ಮದ್ ಶರೀಫ್, ಮಹಮ್ಮದ್ ಇಶಾಕ್ ರಜ್ವಿ, ತೌಸಿಫ್ ರಜ್ವಿ, ಮುಸ್ತಫಾ, ಮೊಹಮ್ಮದ್ ಮುಸ್ತಾಕ್ ರಜ್ವಿ, ಮಸ್ತಾನ, ಮೊಹಮ್ಮದ್ ಆಜಂ ರಜ್ವಿ, ಮೊಹಮ್ಮದ್ ಜಾಫರ್ ಚನ್ನಪಟ್ನ, ಬಿ. ಹಾರುನ್ ಭಾಷಾ, ಮೆಹೆಪೂಜ ಮಲ್ಲಿಕ ಸೇರಿದಂತೆ ಕಂಪ್ಲಿ ಭಾಗದ ಸಾರ್ವಜನಿಕರು, ಯುವಕರು ಹಾಗೂ ಮಹಿಳೆಯರು ಪಾಲ್ಗೊಂಡಿದ್ದರು.

ಕಲ್ಯಾಣ ಕರ್ನಾಟಕ ವಿಮೋಚನೆಯ ಹಿಂದೆ ಪಟೇಲ್‌ರ ದೃಢ ನಿರ್ಧಾರ ಶರಣೇಗೌಡ ಪಾಟೀಲ

❏ ನೈಜ್ಯ ದೆಸೆ ನ್ಯೂಸ್

ನವಲಹಳ್ಳಿ: ದೇಶಕ್ಕೆ 1947ರಲ್ಲಿ ಸ್ವಾತಂತ್ರ್ಯ ದೊರೆತರೂ, ಕಲ್ಯಾಣ ಕರ್ನಾಟಕದ ಹಲವು ಜಿಲ್ಲೆಗಳು ಹೈದರಾಬಾದ್ ನಿಜಾಮನ ಆಳ್ವಿಕೆಯಿಂದ ಮುಕ್ತವಾಗಿರಲಿಲ್ಲ. ಈ ಭಾಗದ ವಿಮೋಚನೆಗಾಗಿ ದಿವಂಗತ ಮಾಜಿ ಸಂಸದ ರಾಮಚಂದ್ರ ವೀರಪ್ಪ ಸೇರಿದಂತೆ ಅಸಂಖ್ಯಾತ ರಾಷ್ಟ್ರಪ್ರೇಮಿಗಳು ಹೋರಾಟ ನಡೆಸಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ಶರಣೇಗೌಡ ಎ. ಪಾಟೀಲ ಹೇಳಿದರು.

ಕುಷ್ಟಗಿ ತಾಲೂಕಿನ ನವಲಹಳ್ಳಿಯ ದಿ. ಆದನಗೌಡ್ರು ಎ. ಪಾಟೀಲ ಸ್ಮಾರಕ ಕಿರಿಯ ಪ್ರಾಥಮಿಕ ಹಾಗೂ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಕಲ್ಯಾಣ ಕರ್ನಾಟಕ



ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಹೈದರಾಬಾದ್ ಸಂಸ್ಥಾನವನ್ನು ಭಾರತ ಒಕ್ಕೂಟದಲ್ಲಿ ವಿಲೀನಗೊಳಿಸುವಲ್ಲಿ ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ದೃಢ ನಿರ್ಧಾರ ಹಾಗೂ ದೂರದೃಷ್ಟಿಯ



ನಾಯಕತ್ವ ಪ್ರಮುಖ ಪಾತ್ರ ವಹಿಸಿತು. 1948ರ ಸೆಪ್ಟೆಂಬರ್ 17ರಂದು ಹೈದರಾಬಾದ್ ಸಂಸ್ಥಾನ ಭಾರತ ಒಕ್ಕೂಟದಲ್ಲಿ ವಿಲೀನಗೊಂಡಿದ್ದು,

ಇದರೊಂದಿಗೆ ಈ ಭಾಗದ ಜನರಿಗೆ ಸ್ವಾತಂತ್ರ್ಯದ ನಿಜವಾದ ಬೆಳಕು ದೊರೆಯಿತು ಎಂದು ಶರಣೇಗೌಡ ಪಾಟೀಲ ತಿಳಿಸಿದರು.

ಕೃಷಿ ಸಾಧನೆಗೆ ನಿಂಗಪ್ಪ ಜಿಗೇರಿ ಸನ್ಮಾನ ಸಂಸ್ಥೆಯ ವತಿಯಿಂದ ಪ್ರತಿವರ್ಷ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಒಬ್ಬ ಸಾಧಕರನ್ನು ಗುರುತಿಸಿ ಗೌರವಿಸಲಾಗುತ್ತದೆ. ಈ ವರ್ಷ ಕೃಷಿ ಕ್ಷೇತ್ರದಲ್ಲಿ ಸಾಧನೆಗೈದು ನಾಡಪ್ರಭು ಕೆಂಪೇಗೌಡ ರಾಜ್ಯ ಪ್ರಶಸ್ತಿ ಪುರಸ್ಕೃತರಾದ ನಿಂಗಪ್ಪ ವೀ. ಜಿಗೇರಿ, ಕಡೇಕೊಪ್ಪ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಪ್ರಾಚಾರ್ಯ ನಂಜುಂಡಿ ಕೆ.ಎಸ್., ಉಪನ್ಯಾಸಕರಾದ ಶಿವಪುತ್ರಪ್ಪ, ಪವಿತ್ರ ಹಾಗೂ ಸಂಗಪ್ಪ, ಶಿಕ್ಷಕರಾದ ದೊಡ್ಡ ಬಸಪ್ಪ, ಶೈಲಾ, ಬಸವರಾಜ್, ಸುಮತಿ, ರೋಹಿಣಿ ಹಾಗೂ ರುಬೀನಾ ಸೇರಿದಂತೆ ಸಂಸ್ಥೆಯ ಸಿಬ್ಬಂದಿ ಉಪಸ್ಥಿತರಿದ್ದರು.

ತಾ.ಪಂ ಕಾರ್ಯಾಲಯದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ

❏ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಕಲ್ಯಾಣ ಕರ್ನಾಟಕದ ಜಿಲ್ಲೆಗಳು ಹಿಂದೆ ಹೈದರಾಬಾದ್ ನಿಜಾಮರ ಆಡಳಿತಕ್ಕೆ ಒಳಪಟ್ಟಿದ್ದವು. ಆದರೆ ಹೈದರಾಬಾದ್ ನಿಜಾಮ ತನ್ನ ಸಂಸ್ಥಾನವನ್ನು ಸ್ವಾತಂತ್ರ್ಯ ಭಾರತದಲ್ಲಿ ವಿಲೀನಗೊಳಿಸಲು ಒಪ್ಪದ ಕಾರಣ ಈ ಭಾಗದ ಜಿಲ್ಲೆಗಳಿಗೆ ಸ್ವಾತಂತ್ರ್ಯ ದೊರೆಯಲಿಲ್ಲ. ಅಂದಿನ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಬಾಯ್ ಪಟೇಲ್ ರವರ ಬಿಗಿಯಾದ ನಿಲುವಿನಿಂದಾಗಿ 1948 ಸೆಪ್ಟಂಬರ್ 17ರಂದು ಈ ಭಾಗಕ್ಕೆ ಸ್ವಾತಂತ್ರ್ಯ ಸಿಕ್ಕಿರುವುದರಿಂದ ಪ್ರತಿ ವರ್ಷವೂ ಸೆಪ್ಟಂಬರ್ 17ರಂದು ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಆಚರಿಸಲಾಗುತ್ತದೆಂದು ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಉಮೇಶ ತಿಳಿಸಿದರು.

ಅವರಿಂದು ತಾಲೂಕ ಪಂಚಾಯತ ಕಾರ್ಯಾಲಯದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆಯ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು ಕಲ್ಯಾಣ ಕರ್ನಾಟಕ ಜಿಲ್ಲೆಗಳಾದ ಬೀದರ, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಭಾರತದ ಒಕ್ಕೂಟದಲ್ಲಿ ವಿಲೀನವಾಗಿ ಈ ಭಾಗಕ್ಕೆ ಸೆಪ್ಟಂಬರ್ 17 , 1948 ರಂದು ಸ್ವಾತಂತ್ರ್ಯ ಸಿಕ್ಕಿತು. ಹೀಗಾಗಿ ಪ್ರತಿ ವರ್ಷವೂ ಸೆಪ್ಟಂಬರ್ 17 ನ್ನು ಹೈದರಾಬಾದ್ ವಿಮೋಚನಾ ದಿನವಾಗಿ ಆಚರಿಸಲಾಗುತ್ತದೆ.

ಹೈದರಾಬಾದ್ ನಿಜಾಮರ ಆಳ್ವಿಕೆಯಿಂದ ವಿಮೋಚನೆ ಪಡೆದುಕೊಂಡು ಭಾರತದ ಒಕ್ಕೂಟದೊಂದಿಗೆ ಸೇರುವಲ್ಲಿ ಮಹತ್ವದ ಪಾತ್ರ ವಹಿಸಿದ ಹಾಗೂ ಇದಕ್ಕಾಗಿ ಶ್ರಮಿಸಿದ ಎಲ್ಲಾ ಮಹನೀಯರಿಗೆ ಗೌರವಪೂರ್ವಕ ನಮನಗಳನ್ನು ಸಲ್ಲಿಸಲಾಯಿತು. ಕಲ್ಯಾಣ ಕರ್ನಾಟಕದ ಜನರ ಶ್ರೇಯೋಭಿವೃದ್ಧಿ ಹಾಗೂ ಈ ಭಾಗದ



ಸಮಗ್ರ ಅಭಿವೃದ್ಧಿಗಾಗಿ ನಾವೆಲ್ಲರೂ ಒಗ್ಗಟ್ಟಾಗಿ ಕಾರ್ಯನಿರ್ವಹಿಸೋಣ. ನಮ್ಮ ಕಲ್ಯಾಣ ಕರ್ನಾಟಕವನ್ನು ಅಭಿವೃದ್ಧಿ ಮತ್ತು ಪ್ರಗತಿಯ ಪಥದಲ್ಲಿ ಮತ್ತಷ್ಟು ಮುನ್ನಡೆಸೋಣ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕ (ಪಂ.ರಾ) ಪಂಪನಗೌಡ ಪಾಟೀಲ್ ಯೋಜನಾಧಿಕಾರಿ ಮಹಿಬುಬ್ ಹಾಗೂ ತಾ.ಪಂ ಸಿಬ್ಬಂದಿಗಳು ಹಾಜರಿದ್ದರು.

ಖಾಸಗಿ ಆಸ್ಪತ್ರೆಯೊಳಗಿನ ಮೆಡಿಕಲ್ ಸ್ಟೋರ್‌ನಲ್ಲಿ ಮ್ಯಾನುವಲ್ ಬಿಲ್ ನೀಡಿ, ಬಡ ರೋಗಿಗಳಿಂದ ಸುಲಿಗೆ ಕ್ರಮಕ್ಕೆ : ಅಂಬೇಡ್ಕರ್ ಸೇನೆ ಆಗ್ರಹ

❏ ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಪಟ್ಟಣದ ಎಲ್ಲ ಖಾಸಗಿ ಆಸ್ಪತ್ರೆಯೊಳಗೆ ನಡೆಯುತ್ತಿರುವ ಮೆಡಿಕಲ್ ಸ್ಟೋರ್‌ನಲ್ಲಿ ಬಡ ದಲಿತ, ಹಿಂದುಳಿದ ಮತ್ತು ಬಡ ರೋಗಿಗಳನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವ ಬಹಿರಂಗ ಅಕ್ರಮ ದಂಧೆ ಹಾಗೂ ಖಾಸಗಿ ಆಸ್ಪತ್ರೆಯೊಳಗಿನ ಮೆಡಿಕಲ್ ಸ್ಟೋರ್‌ನಲ್ಲಿ ಕಾನೂನುಬಾಹಿರವಾಗಿ ಕಂಪ್ಯೂಟರ್ ಬಿಲ್ ನೀಡದೆ ಕೇವಲ ಮ್ಯಾನುವಲ್ ಬಿಲ್ ನೀಡಿ, ಡಿಸ್ಕೌಂಟ್ ನಿರಾಕರಿಸಿ ಬಡ ರೋಗಿಗಳಿಂದ ಸುಲಿಗೆ ಮಾಡುತ್ತಿರುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸ ಬೇಕೆಂದು ಅಂಬೇಡ್ಕರ್ ಸೇನೆಯ ಪ್ರಧಾನ ಕಾರ್ಯದರ್ಶಿ ಅಮರೇಶ್ ಆನೆಹೊಸೂರ್ ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿದರು .

ಕಂಪ್ಯೂಟರ್ ಬಿಲ್ ಇಲ್ಲ, ಬರಿ ಮ್ಯಾನುವಲ್ ಚೀಟಿ ನೀಡಿ ಔಷಧಿ ಕೊಂಡ ಮೇಲೆ GST ಇರುವ ಪಕ್ಕಾ ಕಂಪ್ಯೂಟರ್



ಬಿಲ್ ನೀಡುವ ಕಾನೂನು ಇದ್ದರೂ, ಇವರು ಕೇವಲ ಕೈಬರಹದ ಮ್ಯಾನುವಲ್ ಬಿಲ್ / ಚೀಟಿ ನೀಡಿ ಹಣ ವಸೂಲಿ ಮಾಡುತ್ತಾರೆ. ಇದು ನೇರವಾಗಿ ತೆರಿಗೆ ವಂಚನೆ ಮತ್ತು ಲೆಕ್ಕಕ್ಕೆ ಸಿಗದ ಅಕ್ರಮ ವ್ಯವಹಾರವಾಗಿದೆ. MRP ಮರೆಮಾಚಿ ಸುಲಿಗೆ, ಔಷಧಿಗಳ ಮೇಲೆ MRP ಸ್ಟಿಕ್ಕರ್ ತೆಗೆದು ಅಥವಾ ಸ್ಟ್ರಿಪ್ ಕತ್ತರಿಸಿ, ನಿಜವಾದ ಬೆಲೆ ಗೊತ್ತಾಗದಂತೆ ಮಾಡಿ ಮನಬಂದಂತೆ ದುಪ್ಪಟ್ಟು ಹಣ ವಸೂಲಿ ಮಾಡಲಾಗುತ್ತಿದೆ. ಡಿಸ್ಕೌಂಟ್ ನೀಡಲು ನಿರಾಕರಣೆ ಹೊರಗಿನ ಎಲ್ಲಾ ಮೆಡಿಕಲ್‌ಗಳಲ್ಲಿ ಒಖಕ ಮೇಲೆ 10% ರಿಂದ 20% ಡಿಸ್ಕೌಂಟ್ ನೀಡುವುದು ವಾಡಿಕೆ. ಆದರೆ ಕೆಲ ಆಸ್ಪತ್ರೆಯ ಮೆಡಿಕಲ್ ನವರು ನಮ್ಮಲ್ಲಿ ಯಾವುದೇ ಡಿಸ್ಕೌಂಟ್ ಇಲ್ಲ ಎಂದು ದಬಾಯಿಸಿ ಹೇಳುತ್ತಾರೆ. ರೋಗಿಗಳು ಆಸ್ಪತ್ರೆಯಿಂದ ಹೊರಗೆ ಹೋಗುವಂತಿಲ್ಲ ಎಂಬ ಅನಿವಾರ್ಯತೆಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ.

ಇದು Drugs Price Control Order (DPCO), Drugs & Cosmetics Act ಮತ್ತು ಅಂಟಿ-ಣಾಟಜಡಿ ಕಡಿಂಣಜಭಿಣುಂಟಿ ಂಭಿಣ 2019ರ ಸ್ಪಷ್ಟ ಉಲ್ಲಂಘನೆಯಾಗಿದೆ. ಆಗ್ರಹಗಳು: 1. ಕೂಡಲೇ ಆಡಿಣಾಠ ಖಟಿ-ಶಿಜಭಿಣಾಡಿ ಮತ್ತು ತಹಶೀಲ್ದಾರ್ ನೇತೃತ್ವದಲ್ಲಿ ದಾಳಿ ನಡೆಸಿ ಪರಿಶೀಲನೆ ನಡೆಸಬೇಕು. 2. ಕಂಪ್ಯೂಟರ್ ಬಿಲ್ ಇಲ್ಲದೆ ಮ್ಯಾನುವಲ್ ಬಿಲ್ ಮೂಲಕ ನಡೆಸುತ್ತಿರುವ ಅಕ್ರಮಕ್ಕೆ ದಂಡ ವಿಧಿಸಿ, ಸ್ಟಾಕ್ ಜಪ್ತಿ ಮಾಡಬೇಕು. 3. ಸದರಿ ಮೆಡಿಕಲ್ ಸ್ಟೋರ್‌ನ ಆಡಿಣಾಂ ಖಿಭಿಜಟಿಜ ರದ್ದುಪಡಿಸಬೇಕು. 7 ದಿನದೊಳಗೆ ಕ್ರಮ ಕೈಗೊಳ್ಳದಿದ್ದರೆ ಅಂಬೇಡ್ಕರ್ ಸೇನೆ ವತಿಯಿಂದ ಸಹಾಯಕ ಆಯುಕ್ತರ ಕಚೇರಿ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಆಗ್ರಹಿಸಿದರು . ಈಸಂದರ್ಭದಲ್ಲಿ ಶಶಿಕುಮಾರ ಕೇಸರಹಟ್ಟಿ , ರಾಜುಭಾವಿಮಾನಿ, ಸಂತೋಷ ಬೆಂದೋಣಿ , ಸುದೀಪ್ ಕತ್ತಿ ಸೇರಿದಂತೆ ಇತರರು ಇದ್ದರು .

ಸ್ವಾತಂತ್ರ್ಯದ ಬಗ್ಗೆ ವಿದ್ಯಾರ್ಥಿಗಳು ಅಭಿಮಾನ ಹೊಂದಬೇಕು: ಮಹೇಶ್ ಹೂಗಾರ ಕಿವಿ ಮಾತು

❏ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸ್ವಾತಂತ್ರ್ಯವೆಂಬುದು ಪ್ರತಿಯೊಬ್ಬರ ಹಕ್ಕಾಗಿದೆ. ಹಕ್ಕನ್ನು ಕಿತ್ತುಕೊಂಡು 1 ವರ್ಷ 1 ತಿಂಗಳು 2 ದಿನಗಳ ಕಾಲ ಹೈದರಾಬಾದ್ ಸಂಸ್ಥಾನವನ್ನು ಆಳಿದ ಹೈದರಾಬಾದಿನ ನಿಜಾಮ ಮೇಯರ್ ಉಸ್ಮಾನ್ ಅಲಿಖಾನ್ ಮತ್ತು ಅವನ ಕಾರ್ಯದರ್ಶಿ ಕಾಶಿಮ್ ರಜ್ವಿ ಎನ್ನುವವರು ನಡೆಸಿದ ಹಿಂಸಾಚಾರ, ಕೊಲೆ, ಅತ್ಯಾಚಾರಗಳನ್ನು ಹಿಂದೂಗಳ ಮೇಲೆ ನಡೆಸುತ್ತಿದ್ದರೆಂದು ಉಪನ್ಯಾಸಕ ಮಹೇಶ್ ಹೂಗಾರ ಹೇಳಿದರು.

ತಾಲೂಕಿನ ಜಾಲಿಹಾಳ ಗ್ರಾಮದ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು, ಇದನ್ನು ಪ್ರತಿಭಟಿಸಲು ಕೊಪ್ಪಳ ಭಾಗದಲ್ಲಿ ಶಿವಮೂರ್ತಿ ಅಳವಂಡಿ, ಕಲಬುರ್ಗಿ ಭಾಗದಲ್ಲಿ ಚಂದ್ರಶೇಖರ್ ಪಾಟೀಲ್ ಮತ್ತು



ಶರಣಗೌಡ ಪಾಟೀಲ್ ಹಾಗೂ ರಾಯಚೂರು ಭಾಗದಲ್ಲಿ ಎಂ.ನಾಗಪ್ಪ ಅವರು ಪ್ರತ್ಯೇಕವಾದ ತರಬೇತಿ ಶಿಬಿರಗಳನ್ನು ಆಯೋಜನೆ ಮಾಡುವ ಮೂಲಕ ಈ ಭಾಗದ ವಿದ್ಯಾರ್ಥಿ ಯುವ ಜನರಿಗೆ ಸ್ವಾತಂತ್ರ್ಯ ಬಗ್ಗೆ ಮನವರಿಕೆ ಮಾಡಿಕೊಟ್ಟರು.

ಅಂದಿನ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಾಭಾಯಿ ಪಟೇಲ್ ಅವರ ನೇತೃತ್ವದಲ್ಲಿ ಕೇಂದ್ರ ಪೊಲೀಸ್ ದಳದ ಕಾರ್ಯಾಚರಣೆಯಿಂದಾಗಿ ರಜಾಕಾರರು 1948 ಸೆ.17 ರಂದು ಈ ಪ್ರದೇಶವನ್ನು ಬಿಟ್ಟು ಓಡಿ ಹೋದರು. ಅಂದಿನಿಂದ ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳಲ್ಲಿ ಈ ದಿನಾಚರಣೆಯನ್ನು ಅತ್ಯಂತ ಸಂತೋಷ, ಸಂಭ್ರಮ ಮತ್ತು ಹಬ್ಬದ ರೀತಿಯಲ್ಲಿ ಆಚರಣೆ ಮಾಡುತ್ತಿದ್ದೇವೆ. ಪ್ರತಿಯೊಬ್ಬ ವಿದ್ಯಾರ್ಥಿ ಯುವಜನರು ಸ್ವಾತಂತ್ರ್ಯದ ಬಗ್ಗೆ ಅಭಿಮಾನವನ್ನು ಹೊಂದಿರಬೇಕೆಂದು ಹೇಳಿದರು.

ಉಪನ್ಯಾಸಕರಾದ ಡಾ.ಹುಸೇನಪ್ಪ ಅಮರಾಪುರ, ವೆಂಕಟೇಶ ಬುಕ್ಕನಹಟ್ಟಿ ಮಾತನಾಡಿದರು. ವಿದ್ಯಾರ್ಥಿನಿ ಸ್ಫೂರ್ತಿ ಶ್ರೀಕಾಂತ ಹೈದರಾಬಾದ್ ಕರ್ನಾಟಕ ವಿಮೋಚನೆಯ ನೂರು ಘಟನೆ ಸಾವಿರ ನೆನಪುಗಳ ಬಗ್ಗೆ ವಿವರಿಸಿದರು. ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಚಾರ್ಯ ಮುರುಡಯ್ಯಸ್ವಾಮಿ ಮಾತನಾಡಿ ಸ್ವಾತಂತ್ರ್ಯವು ಪ್ರತಿಯೊಬ್ಬ ಪ್ರಜೆಯ ಬಾಳಿನಲ್ಲಿ ಬೆಳಕನ್ನು ಮೂಡಿಸುತ್ತದೆ ಮತ್ತು ಸಮಾಜದ ಪರಿವರ್ತನೆಗೆ ಸಹಕಾರಿಯಾಗುತ್ತದೆ. ಭಾರತಕ್ಕೆ ಮಹಾತ್ಮ ಗಾಂಧೀಜಿಯವರು ಹೇಗೆ ರಾಷ್ಟ್ರಪಿತ ಎನಿಸಿಕೊಂಡರು ಅದರ ಹಾಗೆ ಹೈದರಾಬಾದ್ ಕರ್ನಾಟಕ ವಿಮೋಚನೆಗೆ ಸ್ವಾಮಿ ರಮಾನಂದ ತೀರ್ಥರು ಪ್ರಮುಖ ಪಾತ್ರವನ್ನು ವಹಿಸಿದ್ದರು ಎಂದರು.

ಕಾರ್ಯಕ್ರಮಕ್ಕೂ ಮೊದಲು ಧ್ವಜಾರೋಹಣವನ್ನು ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷರಾದ ಘನಮಠದಯ್ಯ ನೆರವೇರಿಸಿದರು. ವೇದಿಕೆಯಲ್ಲಿ ಉಪನ್ಯಾಸಕರಾದ ವಿಜಯಕುಮಾರ ಜಂಬನಗೌಡ ಬಸಾಪುರ ಮೊದಲಾದವರಿದ್ದರು. ಕಾರ್ಯಕ್ರಮವನ್ನು ಐಶ್ವರ್ಯ ಲಕ್ಷ್ಮಣ ಬಸಾಪುರ ಅವರು ನಡೆಸಿಕೊಟ್ಟರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101